ಬಳ್ಳಾರಿ । ವಿಜಯನಗರ । ಕೊಪ್ಪಳ । ಬೆಂಗಳೂರು । ದಾವಣಗೆರೆ । ಹುಬ್ಬಳ್ಳಿ-ಧಾರವಾಡ । ಹಾವೇರಿ । ಗದಗ । ಬಾಗಲಕೋಟೆ । ವಿಜಯಪುರ । ಕಲಬುರಗಿ । ತುಮಕೂರು

# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು
EDITOR : S VENKATESULU

ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 34 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಬುಧವಾರ ದಿನಾಂಕ : 12-08-2026 ಪುಟ : 04 ಬೆಲೆ : 2-00

## ಕಾವೇರಿ ನೀರು । ಸುಪ್ರೀಂ ಕೋರ್ಟ್‌ನಲ್ಲಿ ಏನಾಗುತ್ತದೋ ನೋಡೋಣ: ರಾಮಲಿಂಗಾರೆಡ್ಡಿ

ಅನಂತ ಜನಶಕ್ತಿ ನ್ಯೂಸ್ :-


ಕೋಲಾರ: ತಮಿಳುನಾಡಿಗೆ ನಿತ್ಯ 12 ಸಾವಿರ ಕ್ಯುಸೆಕ್ಸ್ ನೀರನ್ನು ಮುಂದಿನ 15 ದಿನ ಹರಿಸಲು ಆದೇಶವಾಗಿದೆ. ಒಟ್ಟು 15.50 ಟಿಎಂಸಿ ಅಡಿ ನೀರು ಹರಿಸಬೇಕಾಗುತ್ತದೆ. ಬುಧವಾರ ಸುಪ್ರೀಂ ಕೋರ್ಟ್‌ನಲ್ಲೂ ವಿಚಾರಣೆ ಇದ್ದು, ಏನಾಗುತ್ತದೆ ನೋಡೋಣ ಎಂದು ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಹೇಳಿದರು.

ನಗರದಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಮ್ಮ ಅಧಿಕಾರಿಗಳು, ವಕೀಲರು ಹಾಗೂ ತಜ್ಞರು ದೆಹಲಿಯಲ್ಲಿದ್ದು, ಈ ವಿಚಾರ ನೋಡಿಕೊಳ್ಳುತ್ತಿದ್ದಾರೆ ಎಂದರು.

ಈಗಾಗಲೇ ತಮಿಳುನಾಡಿಗೆ 3.5 ಟಿಎಂಸಿ ಅಡಿ ನೀರು ಹರಿಸಲಾಗಿದೆ ಎಂಬ ಪ್ರಶ್ನೆಗೆ, '3.5 ಟಿಎಂಸಿ ಅಡಿ ನೀರು ಸಹಜವಾಗಿ ಹರಿಯುವಂಥದ್ದು. ಅಲ್ಲದೇ, ಕಬಿನಿ ಜಲಾಶಯ ತುಂಬಿದ ಕಾರಣ ಅನಿವಾರ್ಯವಾಗಿ ನದಿಗೆ ಹರಿಸಲಾಯಿತು' ಎಂದು ತಿಳಿಸಿದರು.

ರಾಜ್ಯದಲ್ಲಿ ಮುಂಗಾರು ಮಳೆ ಕಡಿಮೆ ಆಗುತ್ತಿದೆ. ತಮಿಳುನಾಡಿಗೆ ಹಿಂಗಾರು ಮಳೆ ಆಗಲಿದೆ. ಅವರಿಗೆ ಇನ್ನೂ ಅವಕಾಶವಿದೆ ಎಂದರು.

ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್ ಅವರು ಕಾವೇರಿ ನೀರಿನ ವಿಚಾರದ ಬಗ್ಗೆ ರಾಜ್ಯದೊಂದಿಗೆ ಮಾತನಾಡಲು ಸಿದ್ಧರಿರುವುದಾಗಿ ನೀಡಿರುವ ಹೇಳಿಕೆಗೆ ಪ್ರತಿಕ್ರಿಯಿಸಿ, 'ಹಿಂದೆಯೇ ಅವರು ಮಾತುಕತೆಗೆ ಬರಬೇಕಿತ್ತು. ರಾಜ್ಯದಲ್ಲಿ ಕೆಲವರ ವಿರೋಧ ಇದ್ದ ಕಾರಣ ಮುಂದೂಡಲಾಗಿತ್ತು. ಕುಳಿತು ಮಾತನಾಡಿ ಬಗೆಹರಿಸಿಕೊಂಡರೆ ಬಹಳ ಒಳ್ಳೆಯದು. ಬರೀ ಕಾವೇರಿ, ಮೇಕೆದಾಟು ವಿಚಾರವಲ್ಲ; ಕೃಷ್ಣಾ, ಮಹದಾಯಿ ಸೇರಿದಂತೆ ಅನೇಕ ನದಿಗಳ ವಿಚಾರದಲ್ಲಿ ಸಮಸ್ಯೆ ಇದೆ. ಅಕ್ಕಪಕ್ಕದ ರಾಜ್ಯಗಳು ಕೇಂದ್ರ ಸರ್ಕಾರದ ಸಮ್ಮುಖದಲ್ಲಿ ಚರ್ಚಿಸಿ ಸಮಸ್ಯೆ ಬಗೆಹರಿಸಿಕೊಳ್ಳಬೇಕು.



# "ಟೀಮ್ ಕರ್ನಾಟಕ" ವಾಗಿ ಕೆಲಸ ಮಾಡಿ; ಜನಸೇವೆಯೇ ಗುರಿಯಾಗಲಿ

## ಸರ್ಕಾರಿ ನೌಕರರಿಗೆ ಸಿಎಂ ಡಿಕೆಶಿ ಕರೆ





ಅನಂತ ಜನಶಕ್ತಿ ನ್ಯೂಸ್ :-

ಬಳ್ಳಾರಿ : ಸರ್ಕಾರದ ಯಶಸ್ಸು ಹಾಗೂ ಸಾರ್ವಜನಿಕ ಸೇವೆಯಲ್ಲಿ ಪ್ರತಿಯೊಬ್ಬ ಅಧಿಕಾರಿ ಮತ್ತು ನೌಕರರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಎಲ್ಲರೂ ಜನಸಾಮಾನ್ಯರ ಸೇವಕರಾಗಿ ಕಾರ್ಯನಿರ್ವಹಿಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕರೆ ನೀಡಿದರು.ಬೆಂಗಳೂರಿನ ವಿಧಾನಸೌಧದ ಬ್ಯಾಂಕ್ವೆಂಟ್ ಹಾಲ್‌ನಲ್ಲಿ ಮಂಗಳವಾರ ನಡೆದ ಕರ್ನಾಟಕ ಸರ್ಕಾರದ ನೌಕರರೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳು ಎಂಬ ಭೇದವಿಲ್ಲದೆ ಜನರ ಏಳಿಗೆಗಾಗಿ ಶ್ರಮಿಸಬೇಕು. ಅಧಿಕಾರಿಗಳ ಜವಾಬ್ದಾರಿ ಕೇವಲ ಆಡಳಿತಕ್ಕೆ ಸೀಮಿತವಾಗದೆ, ಜನರ ಸಮಸ್ಯೆಗಳಿಗೆ ಸ್ಪಂದಿಸುವುದಾಗಿರಬೇಕು ಎಂದರು.ವಿಧಾನಸೌಧವು ನಾಡಿನ ಪ್ರಜಾಸತ್ತಾತ್ಮಕ ಮೌಲ್ಯಗಳ ಸಂಕೇತವಾಗಿದ್ದು, ರಾಜ್ಯವನ್ನು ಮುನ್ನಡೆಸಿದ ಕೆಂಗಲ್ ಹನುಮಂತಯ್ಯ, ಎಸ್.ಎಂ. ಕೃಷ್ಣ, ಸಿದ್ದರಾಮಯ್ಯ ಸೇರಿದಂತೆ ಮಾಜಿ ಮುಖ್ಯಮಂತ್ರಿಗಳ ಕೊಡುಗೆಯನ್ನು ಸ್ಮರಿಸಿದರು.

**ತಾಲೂಕು ಮಟ್ಟದಲ್ಲೇ ಸಮಸ್ಯೆಗಳಿಗೆ ಪರಿಹಾರ**

ಸಾರ್ವಜನಿಕರ ಅರ್ಜಿಗಳು ಹಾಗೂ ಕುಂದುಕೊರತೆಗಳು ಅನಗತ್ಯವಾಗಿ ಜಿಲ್ಲಾ ಅಥವಾ ರಾಜ್ಯ ಮಟ್ಟಕ್ಕೆ ತಲುಪದಂತೆ

**2ನೇ ಪುಟಕ್ಕೆ...**

### ಜನಸೇವೆಗೆ ಆದ್ಯತೆ

ರಾಜ್ಯದ ಸುಮಾರು 7 ಕೋಟಿ ಜನಸಂಖ್ಯೆಯಲ್ಲಿ ಕೆಲವೇ ಸಂಖ್ಯೆಯ ಅಧಿಕಾರಿಗಳು ಹಾಗೂ ನೌಕರರಿಗೆ ಸಾರ್ವಜನಿಕ ಸೇವೆ ಮಾಡುವ ಅವಕಾಶ ದೊರೆತಿದೆ. ಈ ಅವಕಾಶವನ್ನು ಸದ್ಬಳಕೆ ಮಾಡಿಕೊಂಡು ದಕ್ಷತೆ ಹಾಗೂ ನಿಸ್ವಾರ್ಥ ಮನೋಭಾವದಿಂದ ಕಾರ್ಯನಿರ್ವಹಿಸಬೇಕು ಎಂದು ಮುಖ್ಯಮಂತ್ರಿ ತಿಳಿಸಿದರು.ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗ ಮತ್ತು ಪತ್ರಿಕಾರಂಗಗಳು ಸಮನ್ವಯದಿಂದ ಕೆಲಸ ಮಾಡಿದಾಗ ಮಾತ್ರ ರಾಜ್ಯದ ಸಮಗ್ರ ಪ್ರಗತಿ ಸಾಧ್ಯ. ಇತಿಹಾಸವನ್ನು ಓದುವುದಕ್ಕಿಂತ ಹೊಸ ಇತಿಹಾಸ ಸೃಷ್ಟಿಸುವುದು ಮುಖ್ಯ.

## ಡಿಕೆಶಿಗೆ 'ತ್ರಿಶಂಕು' ಧರ್ಮಸಂಕಟ:

### ಬಿ ನಾಗೇಂದ್ರರನ್ನು ಇಟ್ಟುಕೊಂಡ್ರೂ ಕಷ್ಟ, ತೆಗೆದ್ರೂ ನಷ್ಟ!



ಅನಂತ ಜನಶಕ್ತಿ ನ್ಯೂಸ್ :-

ಬೆಂಗಳೂರು: ವಾಲ್ಮೀಕಿ ನಿಗಮ ಹಗರಣದಲ್ಲಿ ಆರೋಪ ಎದುರಿಸುತ್ತಿರುವ ಬಿ ನಾಗೇಂದ್ರ ಅವರಿಗೆ ಡಿಕೆ ಶಿವಕುಮಾರ್ ಸಚಿವ ಸಂಪುಟದಲ್ಲಿ ಅವಕಾಶ ನೀಡಿರುವುದು ಇದೀಗ ಸರ್ಕಾರಕ್ಕೆ ಬಿಸಿ ತುಪ್ಪವಾಗಿದೆ. ನಾಗೇಂದ್ರ ಅವರನ್ನು ಸಂಪುಟದಲ್ಲಿ ಇಟ್ಟುಕೊಳ್ಳಬಾರದು ಎಂಬುವುದು ಬಿಜೆಪಿ, ಜೆಡಿಎಸ್ ವಾದವಾಗಿದೆ. ಮುಂಬರುವ ವಿಧಾನಮಂಡಲ ಅಧಿವೇಶನದಲ್ಲಿ ಈ ವಿಚಾರ ಪ್ರಸ್ತಾಪಿಸಿ ಸರ್ಕಾರದ ವಿರುದ್ಧ ಹೋರಾಟ ಹಮ್ಮಿಕೊಳ್ಳಲು ಬಿಜೆಪಿ ಮುಂದಾಗಿದೆ.

## ವಂದೇ ಮಾತರಂಗೆ ಅಪಮಾನ

### ಅಪರಾಧವಾಗಿಸುವ ವಿಧೇಯಕಕ್ಕೆ ಮುರ್ಮು ಅಂಕಿತ

ಅನಂತ ಜನಶಕ್ತಿ ನ್ಯೂಸ್ :-

ನವದೆಹಲಿ: ರಾಷ್ಟ್ರಗೀತೆಗೆ ಪ್ರಸ್ತುತ ನೀಡಲಾಗಿರುವ ಕಾನೂನು ರಕ್ಷಣೆಯನ್ನೇ ರಾಷ್ಟ್ರೀಯ ಗೀತೆ 'ವಂದೇ ಮಾತರಂ'ಗೂ ವಿಸ್ತರಿಸಿ, ಅದನ್ನು ಹಾಡುವುದಕ್ಕೆ ಉದ್ದೇಶಪೂರ್ವಕವಾಗಿ ಅಡ್ಡಿಪಡಿಸುವುದು ಅಥವಾ ತಡೆಯುವುದನ್ನು ಅಪರಾಧವೆಂದು ಪರಿಗಣಿಸುವ ವಿಧೇಯಕಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಮಂಗಳವಾರ(ಆ.11) ಅಂಕಿತ ಹಾಕಿದ್ದಾರೆ ಎಂದು ಸರ್ಕಾರಿ ಹೇಳಿಕೆ ತಿಳಿಸಿದೆ. ರಾಷ್ಟ್ರಪತಿಯವರ ಅಂಕಿತದೊಂದಿಗೆ, ರಾಷ್ಟ್ರೀಯ ಗೌರವಕ್ಕೆ ಅಪಮಾನ ತಡೆ (ತಿದ್ದುಪಡಿ) ವಿಧೇಯಕ-2026 ಈಗ

**4ನೇ ಪುಟಕ್ಕೆ...**



## ಬೋಗಸ್ ಬಿಲ್ ಮಾಡುವವರನ್ನು ಬಡಿದು ಹಾಕಿಬಿಡ್ತೀನಿ : ಸಿಎಂ ಡಿಕೆಶಿ

ಅನಂತ ಜನಶಕ್ತಿ ನ್ಯೂಸ್ :-



ಬೆಂಗಳೂರು : ಭ್ರಷ್ಟಾಚಾರದ ವಿಚಾರದಲ್ಲಿ ಯಾವುದೇ ಕಾರಣಕ್ಕೂ ರಾಜೀ ಇಲ್ಲ. ಬೋಗಸ್ ಬಿಲ್, ಡಬಲ್ ಬಿಲ್‌ಗಳು ಕಂಡು ಬಂದರೆ ಬಡಿದು ಹಾಕಿಬಿಡುತ್ತೇನೆ. ನನ್ನ ಬಗ್ಗೆ ಇನ್ನೂ ಗೊತ್ತಿಲ್ಲ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಘರ್ಜಿಸಿದ್ದಾರೆ.ವಿಧಾನಸಭೆಯ ಬ್ಯಾಂ-ಕ್ವೆಟ್ ಹಾಲ್‌ನಿಂದ ರಾಜ್ಯಾದ್ಯಂತ 750 ಕೇಂದ್ರಗಳಲ್ಲಿನ ಸರ್ಕಾರಿ ಅಧಿಕಾರಿಗಳು ಮತ್ತು ನೌಕರರೊಂದಿಗಿನ ಸಂವಾದದಲ್ಲಿ ಮಹತ್ವದ ಸಂದೇಶಗಳನ್ನು ರವಾನಿಸಿದ್ದಾರೆ.

ಸರ್ಕಾರದ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿರಬೇಕು. ಇನ್ನೂ ಮುಂದೆ ಪಂಚಾಯಿತಿ ಮಟ್ಟದ ಸಿಬ್ಬಂದಿಗಳಿಂದ ಮುಖ್ಯಮಂತ್ರಿಯವರೆಗೂ ಪ್ರತಿಯೊಬ್ಬರೂ ಎಲ್ಲಿದ್ದಾರೆ ಎಂಬ ಖಚಿತ ಮಾಹಿತಿ ಕಲೆ ಹಾಕುವ ವ್ಯವಸ್ಥೆಯನ್ನು ರೂಪಿಸುವಂತೆ ಮುಖ್ಯ ಕಾರ್ಯದರ್ಶಿಯವರಿಗೆ ಸೂಚಿಸಿದ್ದಾರೆ. ಎಲ್ಲಾ ಅಧಿಕಾರಿ ಮತ್ತು ಸಿಬ್ಬಂದಿಗಳು ಕಡ್ಡಾಯವಾಗಿ ಕೇಂದ್ರ ಸ್ಥಾನದಲ್ಲಿರಬೇಕು. ಮಧ್ಯಾಹ್ನದ ಬಳಿಕ ಸಾರ್ವಜನಿಕರನ್ನು ಭೇಟಿಯಾಗಿ ಸಮಸ್ಯೆಗಳನ್ನು ಬಗೆ ಹರಿಸಬೇಕು. ಅರ್ಜಿಗಳನ್ನು ಸ್ವಿಕರಿಸಿ, ಇತ್ಯರ್ಥ ಪಡಿಸಿದ್ದೇವೆ ಎಂದರಷ್ಟೆ ಸಾಲದು, ಸಮಸ್ಯೆ ಬಗೆ ಹರಿದಿರಬೇಕು. ಜನರ ಸಮಸ್ಯೆಗಳಿಗೆ ಸ್ಥಳೀಯವಾಗಿಯೇ ಪರಿಹಾರ ದೊರಕಿಸಬೇಕು ಎಂದು ಹೇಳಿದರು.

ಭ್ರಷ್ಟಾಚಾರದ ವಿಚಾರದಲ್ಲಿ ಯಾವುದೇ ರಾಜಿ ಇಲ್ಲ. ಅಧಿಕಾರಿಗಳು ಸರಳತೆ ರೂಢಿಸಿಕೊಳ್ಳಬೇಕು. ಸಾರ್ವಜನಿಕರ ಜೊತೆ ಸೌಹಾರ್ದತೆಯಿಂದ ವರ್ತಿಸಬೇಕು. ಭ್ರಷ್ಟಾಚಾರಕ್ಕೆ ಪೂರ್ಣ ವಿರಾಮ ಹಾಕಬೇಕು. ಅಧಿಕಾರಿಗಳ

**4ನೇ ಪುಟಕ್ಕೆ...**

## ಬರಗಾಲ ನಿರ್ವಹಣೆಗೆ ತುರ್ತು ಕ್ರಮ

### ಅಧಿಕಾರಿಗಳು ತುರ್ತು ಪರಿಸ್ಥಿತಿಯ ಮಾದರಿಯಲ್ಲಿ ಕಾರ್ಯನಿರ್ವಹಿಸಬೇಕು: ಡಿಸಿಎಂ ಡಾ. ಜಿ. ಪರಮೇಶ್ವರ್



ಅನಂತ ಜನಶಕ್ತಿ ನ್ಯೂಸ್ :-

ಬಳ್ಳಾರಿ : ರಾಜ್ಯದಲ್ಲಿ ತೀವ್ರ ಬರಗಾಲದ ಪರಿಸ್ಥಿತಿ ನಿರ್ಮಾಣವಾಗಿದ್ದು, ಸಾರ್ವಜನಿಕರು ಹಾಗೂ ರೈತರ ಸಮಸ್ಯೆಗಳಿಗೆ ತ್ವರಿತ ಪರಿಹಾರ ಒದಗಿಸಲು ಅಧಿಕಾರಿಗಳು ತುರ್ತು ಪರಿಸ್ಥಿತಿಯ ಮಾದರಿಯಲ್ಲಿ ಕಾರ್ಯನಿರ್ವಹಿಸಬೇಕು ಎಂದು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಸೂಚಿಸಿದರು.ಮಂಗಳವಾರ ವಿಧಾನಸೌಧದ ಬ್ಯಾಂಕ್ವೆಂಟ್ ಹಾಲ್‌ನಲ್ಲಿ ನಡೆದ ವಿಡಿಯೋ ಸಂವಾದ ಕಾರ್ಯಕ್ರಮದಲ್ಲಿ ತುಮಕೂರು

**2ನೇ ಪುಟಕ್ಕೆ...**

## ವಿಧಾನಸಭೆಗೆ ಆಗಸ್ಟ್ 14 ರಂದು ಹೊಸ ಸ್ಪೀಕರ್ ಆಯ್ಕೆ

ಅನಂತ ಜನಶಕ್ತಿ ನ್ಯೂಸ್ :-

ಬೆಂಗಳೂರು: ವಿಧಾನಸಭೆಗೆ ಆಗಸ್ಟ್ 14 ರಂದು ಹೊಸ ಸ್ಪೀಕರ್ ಆಯ್ಕೆಯಾಗಲಿದ್ದಾರೆ. ಪ್ರಸ್ತುತ ಸ್ಪೀಕರ್ ಮತ್ತು ಉಪ ಸ್ಪೀಕರ್ ಹುದ್ದೆಗಳು ಖಾಲಿಯಾಗಿದ್ದು, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಆಗಸ್ಟ್ 3 ರಂದು ಹಿರಿಯ ಕಾಂಗ್ರೆಸ್ ಶಾಸಕ ಟಿ ಬಿ ಜಯಚಂದ್ರ ಅವರನ್ನು ಹಂಗಾಮಿ ಸ್ಪೀಕರ್ ಆಗಿ ನೇಮಿಸಿದ್ದರು.


"ವಿಧಾನಸಭೆಯಲ್ಲಿ ಕಾರ್ಯವಿಧಾನ ಮತ್ತು ವ್ಯವಹಾರ ನಡವಳಿಕೆಯ ನಿಯಮಗಳ ಉಪ-ನಿಯಮ 7(1) ರ ಅಡಿಯಲ್ಲಿ, ಗೌರವಾನ್ವಿತ ರಾಜ್ಯಪಾಲರು ಆಗಸ್ಟ್ 14, 2026, ಶುಕ್ರವಾರವನ್ನು ಸ್ಪೀಕರ್ ಚುನಾವಣೆಗೆ ದಿನಾಂಕವಾಗಿ ನಿಗದಿಪಡಿಸಿದ್ದಾರೆ" ಎಂದು ಕರ್ನಾಟಕ ವಿಧಾನಸಭೆ ಬುಲೆಟಿನ್‌ನಲ್ಲಿ ತಿಳಿಸಿದೆ. "ಆಗಸ್ಟ್ 13, 2026 ರ




ಗುರುವಾರ ಮಧ್ಯಾಹ್ನ 12.00 ಗಂಟೆಯ ಮೊದಲು ಯಾವುದೇ ಸದಸ್ಯರು ಕಾರ್ಯದರ್ಶಿಗೆ ಲಿಖಿತವಾಗಿ ನೋಟಿಸ್ ನೀಡಬಹುದು, ಮತ್ತೊಬ್ಬ ಸದಸ್ಯರನ್ನು ಸ್ಪೀಕರ್ ಆಗಿ ಆಯ್ಕೆ ಮಾಡುವ ಪ್ರಸ್ತಾವನೆಯ ಬಗ್ಗೆ ಮತ್ತು ಆ ಸೂಚನೆಯನ್ನು ಮೂರನೇ ಸದಸ್ಯರು ಅನುಮೋದಿಸಬೇಕು ಮತ್ತು ನೋಟಿಸ್‌ನಲ್ಲಿ ಹೆಸರನ್ನು ಪ್ರಸ್ತಾಪಿಸಲಾದ ಸದಸ್ಯರು ಆಯ್ಕೆಯಾದರೆ

**4ನೇ ಪುಟಕ್ಕೆ...**

## ರಷ್ಯಾ-ಭಾರತ ನಡುವೆ ಹೊಸ ರೈಲು ಮಾರ್ಗ



ಅನಂತ ಜನಶಕ್ತಿ ನ್ಯೂಸ್ :-

ಮಾಸ್ಕೋ: ಭಾರತ ಮತ್ತು ರಷ್ಯಾ ನಡುವಿನ ವ್ಯಾಪಾರಕ್ಕೆ ಹೊಸ ದಾರಿ ತೆರೆಯುವ ಮಹತ್ವದ ಪ್ರಸ್ತಾವನೆ ಚರ್ಚೆಗೆ ಬಂದಿದೆ. ರಷ್ಯಾದಿಂದ ಭಾರತವನ್ನು ತಲುಪುವ ಸರಕು ಸಾಗಣೆಗಾಗಿ ಹೊಸ ಭೂ ಮಾರ್ಗ, ಅದರಲ್ಲೂ ರೈಲು ಸಂಪರ್ಕ ಕಲ್ಪಿಸುವ ಸಾಧ್ಯತೆ ಕುರಿತು ಚರ್ಚೆಗಳು ಆರಂಭವಾಗಿವೆ. ಪ್ರಸ್ತಾವಿತ ಮಾರ್ಗ

**2ನೇ ಪುಟಕ್ಕೆ..**

ಒಂದನೇ ಪುಟದಿಂದ..

# ರಷ್ಯಾ-ಭಾರತ ನಡುವೆ ಹೊಸ ರೈಲು ಮಾರ್ಗ

## ಪಾಕ್, ಅಫ್ಘಾನ್ ಮೂಲಕ ಹಿಂದೂ ಮಹಾಸಾಗರಕ್ಕೆ ಸಂಪರ್ಕ

ರಷ್ಯಾದಿಂದ ಆರಂಭವಾಗಿ ತುರ್ಕಮೆನಿಸ್ತಾನ್, ಇರಾನ್, ಅಫ್ಘಾನಿಸ್ತಾನ ಮತ್ತು ಪಾಕಿಸ್ತಾನದ ಮೂಲಕ ಸಾಗುತ್ತಾ ಹಿಂದೂ ಮಹಾಸಾಗರವನ್ನು ತಲುಪುವ ಸಾಧ್ಯತೆ ಇದೆ ಎಂದು ವರದಿಯಾಗಿದೆ.

ಸದ್ಯ ಭಾರತ-ರಷ್ಯಾ ನಡುವೆ ದೊಡ್ಡ ಪ್ರಮಾಣದ ಸರಕು ಸಾಗಣೆ ಮುಖ್ಯವಾಗಿ ಸಮುದ್ರ ಮಾರ್ಗದ ಮೂಲಕ ನಡೆ-ಯುತ್ತಿದೆ. ಆದರೆ, ಹಾರ್ಮುಜ್ ಜಲಸಂಧಿ ಸೇರಿದಂತೆ ಪ್ರಮುಖ ಜಲಮಾರ್ಗಗಳಲ್ಲಿ ಉದ್ವಿಗ್ನತೆ ಹೆಚ್ಚಾದರೆ ಸರಕು ಸಾಗಣೆ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ. ಹೀಗಾಗಿ ಪರ್ಯಾಯ ಭೂ ಮಾರ್ಗದ ಅಗತ್ಯದ ಬಗ್ಗೆ ಚರ್ಚೆ ನಡೆಯುತ್ತಿದೆ.

ಭಾರತವನ್ನು ತಲುಪಲು ಸಾಧ್ಯವಿರುವ ಪ್ರತಿಯೊಂದು ಮಾರ್ಗವನ್ನೂ ಪರಿಶೀಲಿಸಬೇಕು ಎಂದು ರಷ್ಯಾದ ಉಪ ಪ್ರಧಾನಿ ಮರಾತ್ ಖುಸ್ನುಲಿನ್ ಹೇಳಿದ್ದಾರೆ. ಬಾಸ್ಫರಸ್ ಮತ್ತು ಹಾರ್ಮುಜ್ ಜಲಸಂಧಿಗೆ ಸಂಬಂಧಿಸಿದ ಅಪಾಯಗಳನ್ನು ಗಮನದಲ್ಲಿಟ್ಟುಕೊಂಡು ಪರ್ಯಾಯ ಮಾರ್ಗಗಳನ್ನು ಹುಡುಕುವ ಅಗತ್ಯವಿದೆ ಎಂದು ಅವರು ಹೇಳಿದ್ದಾರೆ.

ಹಾರ್ಮುಜ್ ಜಲಸಂಧಿ ಜಾಗತಿಕ ಇಂಧನ ಸಾಗಣೆಗೆ ಅತ್ಯಂತ ಪ್ರಮುಖ ಮಾರ್ಗವಾಗಿದೆ. ಇಲ್ಲಿ ಯಾವುದೇ ದೊಡ್ಡ ಮಟ್ಟದ ಅಡಚಣೆ ಉಂಟಾದರೆ ಭಾರತದ ತೈಲ ಮತ್ತು ಎಲ್‌ಎನ್‌ಜಿ ಆಮದಿನ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ.

ರೈಲು ಮಾರ್ಗ ಕಾರ್ಯರೂಪಕ್ಕೆ ಬಂದರೆ ಸಮುದ್ರ ಮಾರ್ಗದ ಮೇಲಿನ ಭಾರತದ ಅವಲಂಬನೆ ಕಡಿಮೆಯಾಗಬಹುದು.

ಸರಕು ಸಾಗಣೆಯ ಸಮಯ ಮತ್ತು ವೆಚ್ಚವನ್ನು ಕಡಿಮೆ ಮಾಡುವ ಅವಕಾಶವೂ ಸಿಗಬಹುದು. ವಿಶೇಷವಾಗಿ ರಷ್ಯಾದಿಂದ ಕಚ್ಚಾ ತೈಲ, ರಸಗೊಬ್ಬರ ಸೇರಿದಂತೆ ಪ್ರಮುಖ ವಸ್ತುಗಳ ಆಮದಿಗೆ ಪರ್ಯಾಯ ಮಾರ್ಗ ಸಿಗುವುದು ಭಾರತಕ್ಕೆ ತಂತ್ರಾತ್ಮಕವಾಗಿ ಸಹಾಯವಾಗಬಹುದು.

ಭಾರತ ಈಗಾಗಲೇ ಇರಾನ್‌ನ ಚಬಹಾರ್ ಬಂದರು ಮತ್ತು ಅಂತರರಾಷ್ಟ್ರೀಯ ಉತ್ತರ-ದಕ್ಷಿಣ ಸಾರಿಗೆ ಕಾರಿಡಾರ್ ಮೂಲಕ ಮಧ್ಯ ಏಷ್ಯಾ ಹಾಗೂ ಯುರೇಷಿಯಾ ಪ್ರದೇಶದೊಂದಿಗೆ ಸಂಪರ್ಕ ಹೆಚ್ಚಿಸಲು ಕೆಲಸ ಮಾಡುತ್ತಿದೆ. ಹೊಸ ಪ್ರಸ್ತಾವನೆಯೂ ಇದೇ ದೊಡ್ಡ ಸಂಪರ್ಕ ಯೋಜನೆಗಳ ಭಾಗವಾಗುವ ಸಾಧ್ಯತೆ ಇದೆ.

ಈ ರೈಲು ಮಾರ್ಗದ ಮುಂದೆ ದೊಡ್ಡ ಸವಾಲು ಕೂಡ ಇದೆ. ಪ್ರಸ್ತಾವಿತ ಮಾರ್ಗ ಪಾಕಿಸ್ತಾನ ಮತ್ತು ಅಫ್ಘಾನಿಸ್ತಾನದ ಮೂಲಕ ಸಾಗಬೇಕಿದೆ. ಭಾರತ-ಪಾಕಿಸ್ತಾನ ನಡುವಿನ ಭೂ ಮಾರ್ಗದ ವ್ಯಾಪಾರ ಹಲವು ವರ್ಷಗಳಿಂದ ಸ್ಥಗಿತಗೊಂಡಿರುವುದರಿಂದ ಪಾಕಿಸ್ತಾನದ ಮೂಲಕ ಸಾಗಣೆ ಹಕ್ಕು ಪಡೆಯುವುದು ದೊಡ್ಡ ರಾಜತಾಂತ್ರಿಕ ಸವಾಲಾಗಬಹುದು.

ಅಫ್ಘಾನಿಸ್ತಾನದ ಭದ್ರತೆ ಮತ್ತು ಮೂಲಸೌಕರ್ಯ ಕೂಡ ಮತ್ತೊಂದು ಪ್ರಮುಖ ಪ್ರಶ್ನೆಯಾಗಿದೆ. ಇದರ ಜೊತೆಗೆ ವಿವಿಧ ದೇಶಗಳ ರೈಲು ಗೇಜ್, ಕಸ್ಟಮ್ಸ್ ನಿಯಮಗಳು ಮತ್ತು ಹೊಸ ಮೂಲಸೌಕರ್ಯ ನಿರ್ಮಾಣದ



ಅಗತ್ಯ ಯೋಜನೆಯನ್ನು ಮತ್ತಷ್ಟು ಸಂಕೀರ್ಣಗೊಳಿಸಬಹುದು.

ಮುಖ್ಯವಾಗಿ ಗಮನಿಸಬೇಕಾದ ಅಂಶವೆಂದರೆ, ಇದು ಸದ್ಯಕ್ಕೆ ರಷ್ಯಾದ ಪ್ರಸ್ತಾವನೆಯ ಹಂತದಲ್ಲಿದೆ. ಅಂತಿಮ ಮಾರ್ಗ ಅಥವಾ ಯೋಜನೆಗೆ ಇನ್ನೂ ಅಧಿಕೃತ ಒಪ್ಪಿಗೆ ಸಿಕ್ಕಿಲ್ಲ. ರಾಜಕೀಯ ಒಮ್ಮತ, ಭದ್ರತಾ ವ್ಯವಸ್ಥೆ ಮತ್ತು ಆರ್ಥಿಕ ಕಾರ್ಯಸಾಧ್ಯತೆ ಸೇರಿದಂತೆ ಹಲವು ಅಂಶಗಳನ್ನು ಪರಿಶೀಲಿಸಿದ ಬಳಿಕವಷ್ಟೇ ಯೋಜನೆ ಮುಂದುವರಿಯಬೇಕಿದೆ. ಯೋಜನೆ ನಿಜವಾಗಿಯೂ ಜಾರಿಗೆ ಬಂದರೆ, ಭಾರತ-ರಷ್ಯಾ ವ್ಯಾಪಾರಕ್ಕೆ ಮಾತ್ರವಲ್ಲದೆ ಇಡೀ ಯುರೇಷಿಯಾ ಪ್ರದೇಶದ ಸರಕು ಸಾಗಣೆ ವ್ಯವಸ್ಥೆಯಲ್ಲೇ ದೊಡ್ಡ ಬದಲಾವಣೆಯಾಗುವ ಸಾಧ್ಯತೆ ಇದೆ.

# ಬರಗಾಲ ನಿರ್ವಹಣೆಗೆ ತುರ್ತು ಕ್ರಮ

ಜಿಲ್ಲೆಯ ಕುಣಿಗಲ್ ತಾಲೂಕು ಕಚೇರಿಯಿಂದ ವಿಡಿಯೋ ಸಂವಾದದ ಮೂಲಕ ಭಾಗವಹಿಸಿ ಅವರು ಮಾತನಾಡಿದರು.ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿ, ಸರ್ಕಾರದ ಯೋಜನೆಗಳು ಹಾಗೂ ಪರಿಹಾರ ಕ್ರಮಗಳನ್ನು ತಳಮಟ್ಟದ ಜನರಿಗೆ ತಲುಪಿಸುವ ಉದ್ದೇಶದಿಂದ 'ಪ್ರಜಾಸೇವೆ' ಕಾರ್ಯಕ್ರಮ ಜಾರಿಗೊಳಿಸಲಾಗಿದೆ ಎಂದು ತಿಳಿಸಿದರು.

164 ತಾಲೂಕುಗಳಲ್ಲಿ ತೀವ್ರ ಬರ

ರಾಜ್ಯದ ಒಟ್ಟು 240 ತಾಲೂಕುಗಳ ಪೈಕಿ 164 ತಾಲೂಕುಗಳಲ್ಲಿ ಮಳೆ ಕೊರತೆಯಿಂದ ತೀವ್ರ ಬರಗಾಲ ಆವರಿಸಿದೆ. ಬೆಳೆ ನಷ್ಟದಿಂದ ರೈತರು ಸಂಕಷ್ಟದಲ್ಲಿದ್ದು, ಬೋರ್‌ವೆಲ್‌ಗಳಲ್ಲಿ ಅಂತರ್ಜಲ ಮಟ್ಟ ಕುಸಿದಿದೆ. ಇದರಿಂದ ಕುಡಿಯುವ ನೀರಿನ ಸಮಸ್ಯೆಯೂ ಹೆಚ್ಚಾಗಿದೆ. ನೆರೆಯ ರಾಜ್ಯಗಳಲ್ಲಿಯೂ ಬೆಳೆ ಇಲ್ಲದ ಕಾರಣ ಜಾನುವಾರುಗಳಿಗೆ ಮೇವಿನ ಕೊರತೆ ಎದುರಾಗಿದೆ.ಈ ಹಿನ್ನೆಲೆಯಲ್ಲಿ ಕೆಎಂಎಫ್ ಮೂಲಕ ತುಮಕೂರು ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ 1 ಲಕ್ಷ ಮೇವಿನ ಕಿಟ್‌ಗಳನ್ನು ವಿತರಿಸುವ ಪ್ರಕ್ರಿಯೆ ಆರಂಭಿಸಲಾಗಿದೆ ಎಂದು ಉಪಮುಖ್ಯಮಂತ್ರಿ ತಿಳಿಸಿದರು.

ಉದ್ಯೋಗ ಖಾತರಿ ಕಾಮಗಾರಿಗಳಿಗೆ ಆದ್ಯತೆ

ಗ್ರಾಮೀಣ ಪ್ರದೇಶಗಳಿಂದ ಜನರು ಗುಳೆ ಹೋಗುವುದನ್ನು ತಡೆಯಲು ಉದ್ಯೋಗ ಖಾತರಿ ಕಾಮಗಾರಿಗಳಿಗೆ 'ವಿಬಿ ಜಿ ರಾಮ್ ಜಿ' ಯೋಜನೆಯಡಿ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. ರಾಜ್ಯದಲ್ಲಿ ಈಗಾಗಲೇ 51 ಸಾವಿರ ಮಾನವ ದಿನಗಳ ಕಾಮಗಾರಿಗಳಿಗೆ ಅನುಮೋದನೆ ನೀಡಲಾಗಿದೆ ಎಂದು ತಿಳಿಸಿದರು.ಬೆಳೆ ವಿಮೆ ನೋಂದಣಿ ಸಂದರ್ಭದಲ್ಲಿ ಆಸಕ್ತಿ ತೋರುವ ವಿಮಾ ಕಂಪನಿಗಳು ರೈತರಿಗೆ ನಷ್ಟ ಪರಿಹಾರ ನೀಡುವಲ್ಲಿ ವಿಳಂಬ ಮಾಡುತ್ತಿರುವ ಬಗ್ಗೆ ಶೀಘ್ರದಲ್ಲೇ ಪ್ರತ್ಯೇಕ ಸಭೆ ನಡೆಸಿ ಕ್ರಮ ಕೈಗೊಳ್ಳಲಾಗುವುದು ಎಂದರು.

ಪ್ರತಿ ಪಂಚಾಯಿತಿಯಲ್ಲಿ 'ಭಾರತ್ ಜೋಡೋ' ಗ್ರಾಮೀಣ ಪ್ರದೇಶದಲ್ಲಿ ಸಾಮಾಜಿಕ ಹಾಗೂ ಸಾಂಸ್ಕೃತಿಕ ಭಾವೈಕ್ಯತೆ ಮೂಡಿಸುವ ಉದ್ದೇಶದಿಂದ ಪ್ರತಿಯೊಂದು ಪಂಚಾಯಿತಿಯಲ್ಲಿ 'ಭಾರತ್ ಜೋಡೋ' ಸಂಘಗಳನ್ನು ರಚಿಸಲಾಗುತ್ತಿದೆ. ಪ್ರತಿ ಸಂಘಕ್ಕೆ ವರ್ಷಕ್ಕೆ 10 ಲಕ್ಷ ರೂಪಾಯಿ ಅನುದಾನ ನೀಡುವ ವಿನೂತನ ಯೋಜನೆಗೆ ಚಾಲನೆ ನೀಡಲಾಗುತ್ತಿದೆ ಎಂದು ಹೇಳಿದರು.ಸೆಪ್ಟೆಂಬರ್ ತಿಂಗಳಲ್ಲಿ ಬರಗಾಲದ ತೀವ್ರತೆ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಬಗ್ಗೆ ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿರುವ ಹಿನ್ನೆಲೆಯಲ್ಲಿ ಪ್ರತಿಯೊಬ್ಬ ಜಿಲ್ಲಾಧಿಕಾರಿ, ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿದ್ದು, ಸಾರ್ವಜನಿಕರ ಅಹವಾಲುಗಳನ್ನು ಆಲಿಸಬೇಕು ಎಂದು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಸೂಚಿಸಿದರು.

# ರಾಜ್ಯದ ವಿಧಾನಸಭೆಗೆ ಆಗಸ್ಟ್ 14 ರಂದು ಹೊಸ ಸ್ಪೀಕರ್ ಆಯ್ಕೆ

ಅವರು ಸ್ಪೀಕರ್ ಆಗಿ ಸೇವೆ ಸಲ್ಲಿಸಲು ಸಿದ್ಧರಿದ್ದಾರೆ ಎಂದು ಹೇಳಿಕೆಯೊಂದಿಗೆ ಇರಬೇಕು. ಅಂತಹ ಸೂಚನೆಯನ್ನು ಅಭ್ಯರ್ಥಿ, ಪ್ರಸ್ತಾಪಕರು ಅಥವಾ ಅನುಮೋದಿಸಿದವರು ಕಾರ್ಯದರ್ಶಿಗೆ ಖುದ್ದಾಗಿ ತಲುಪಿಸಬೇಕು" ಎಂದು ಬುಲೆಟಿನ್ ಹೇಳಿದೆ.

ಜೂನ್ 3 ರಂದು ಯು ಟಿ ಖಾದರ್ ಅವರನ್ನು ಸಂಪುಟಕ್ಕೆ ಸೇರಿಸಿಕೊಂಡ ನಂತರ ಸ್ಪೀಕರ್ ಸ್ಥಾನ ತೆರವಾಗಿದೆ. ಉಪ ಸ್ಪೀಕರ್ ರುದ್ರಪ್ಪ ಲಮಾಣಿ ನಂತರ ಸ್ಪೀಕರ್ ಪಾತ್ರವನ್ನು ನಿರ್ವಹಿಸುತ್ತಿದ್ದರು.

ಆಗಸ್ಟ್ 3 ರಂದು, ಸಂಪುಟ ವಿಸ್ತರಣೆಯ ಸಮಯದಲ್ಲಿ ಲಮಾಣಿ ಅವರನ್ನು ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ನೇತೃತ್ವದ ಸಂಪುಟಕ್ಕೆ ಸೇರಿಸಲಾಯಿತು. ಕಾಂಗ್ರೆಸ್ ಹೈಕಮಾಂಡ್ ಸ್ಪೀಕರ್ ಹುದ್ದೆಗೆ ಪಕ್ಷದ ನಾಮನಿರ್ದೇಶಿತರಾಗಿ ಜಿ ಎಸ್ ಪಾಟೀಲ್ ಮತ್ತು ಉಪ ಸ್ಪೀಕರ್ ಹುದ್ದೆಗೆ ಎ ಎಸ್ ಪೊನ್ನಣ್ಣ ಅವರ ಹೆಸರುಗಳನ್ನು ಅನುಮೋದಿಸಿದೆ.

ಅಧಿಕೃತ ಮೂಲಗಳ ಪ್ರಕಾರ, ಆಡಳಿತಾರೂಢ ಕಾಂಗ್ರೆಸ್ ವಿಧಾನಸಭೆಯಲ್ಲಿ ಸ್ಪಷ್ಟ ಬಹುಮತ ಹೊಂದಿರುವುದರಿಂದ ಅವರು ಆಯ್ಕೆಯಾಗುವ ಸಾಧ್ಯತೆಯಿದೆ.

# ಸರ್ಕಾರಿ ನೌಕರರಿಗೆ ಸಿಎಂ ಡಿಕೆಶಿ ಕರೆ

ತಾಲೂಕು ಮತ್ತು ಸ್ಥಳೀಯ ಮಟ್ಟದಲ್ಲೇ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕು. ತಾಲೂಕು ಮಟ್ಟದ ಅಧಿಕಾರಿಗಳು, ಕಂದಾಯ ನಿರೀಕ್ಷಕರು, ಗ್ರಾಮ ಆಡಳಿತಾಧಿಕಾರಿಗಳು ಸೇರಿದಂತೆ ಎಲ್ಲಾ ಅಧಿಕಾರಿಗಳು ತಮ್ಮ ನಿಯೋಜಿತ ಕೇಂದ್ರ ಸ್ಥಾನದಲ್ಲೇ ವಾಸವಿದ್ದು, ಕಚೇರಿಗಳಲ್ಲಿ ಕಡ್ಡಾಯವಾಗಿ ಲಭ್ಯವಿರಬೇಕು. ಸಾರ್ವಜನಿಕರ ಅಹವಾಲುಗಳನ್ನು ಆಲಿಸಿ ತ್ವರಿತವಾಗಿ ಸ್ಪಂದಿಸಬೇಕು ಎಂದು ಸೂಚಿಸಿದರು.

ಮನೆ ಬಾಗಿಲಿಗೆ ಖಾತಾ ತಲುಪಿಸುವ ಗುರಿ

ಗ್ರಾಮೀಣ ಪ್ರದೇಶದ ಸುಮಾರು 1 ಕೋಟಿ 11 ಲಕ್ಷ ಕುಟುಂಬಗಳು ಹಾಗೂ ನಗರ ಪ್ರದೇಶದ 25 ಲಕ್ಷ ಮನೆಗಳಿಗೆ ಯಾವುದೇ ಲಂಚವಿಲ್ಲದೆ ಉಚಿತವಾಗಿ ಫೋಟೋ-ಜೊ ಮತ್ತು ಸಹಿಯೊಂದಿಗೆ ಖಾತಾ ಹಾಗೂ ಪ್ರಮಾಣಪತ್ರಗಳನ್ನು ತಲುಪಿಸುವ ಐತಿಹಾಸಿಕ ನಿರ್ಧಾರ ಕೈಗೊಳ್ಳಲಾಗಿದೆ. ಮುಂದಿನ 5ರಿಂದ 6 ತಿಂಗಳೊಳಗೆ ರಾಜ್ಯದ ಎಲ್ಲಾ ಪಂಚಾಯಿತಿ ಹಾಗೂ ಹೋಬಳಿಗಳಲ್ಲಿ ಈ ಕಾರ್ಯ ಪೂರ್ಣಗೊಳಿಸಬೇಕು ಎಂದು ನಿರ್ದೇಶನ ನೀಡಿದರು.

ರಾಜ್ಯ ಸರ್ಕಾರದ ಸಾಮಾಜಿಕ ಭದ್ರತಾ ಯೋಜನೆಗಳು ಹಾಗೂ ಗ್ಯಾರಂಟಿ ಯೋಜನೆಗಳನ್ನು ದೇಶದ ಇತರ ರಾಜ್ಯಗಳೂ ಅನುಸರಿಸುತ್ತಿದ್ದು, 'ಕರ್ನಾಟಕ ಮಾದರಿ' ರಾಷ್ಟ್ರಮಟ್ಟದಲ್ಲಿ ಗುರುತಿಸಿಕೊಂಡಿದೆ. ಅಧಿಕಾರವು ಕೇವಲ ಶಕ್ತಿಯ ಸಂಕೇತವಲ್ಲ, ಅದು ಸಾರ್ವಜನಿಕ ಜವಾಬ್ದಾರಿಯಾಗಿದೆ. ಬಸವಣ್ಣನವರ ಆಶಯದಂತೆ 'ಜನಸೇವೆಯೇ ಜನಾರ್ದನ ಸೇವೆ' ಎಂಬ ತತ್ವದಡಿ ಪ್ರತಿಯೊಬ್ಬರೂ ಕಾರ್ಯನಿರ್ವಹಿಸಬೇಕು ಎಂದು ಕರೆ ನೀಡಿದರು.ಕಚೇರಿಗಳಿಗೆ ಬರುವ ಸಾರ್ವಜನಿಕರನ್ನು ಗೌರವದಿಂದ ಕಾಣಬೇಕು. ಅವರ ಸಮಸ್ಯೆಗಳನ್ನು ಆಲಿಸಿ ಕಾನೂನುಬದ್ಧವಾಗಿ ಪರಿಹಾರ ಒದಗಿಸಬೇಕು. ತಂತ್ರಜ್ಞಾನವನ್ನು ಗರಿಷ್ಠವಾಗಿ ಬಳಸಿಕೊಂಡು ಆಡಳಿತದಲ್ಲಿ ಪಾರದರ್ಶಕತೆ ತರಬೇಕು ಹಾಗೂ ಭ್ರಷ್ಟಾಚಾರಕ್ಕೆ ಅವಕಾಶವಿಲ್ಲದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ಸರ್ಕಾರದ ಕಾರ್ಯಗಳಲ್ಲಿ ಯಾವುದೇ ಕಾರಣಕ್ಕೂ ಭ್ರಷ್ಟಾಚಾರವನ್ನು ಸಹಿಸುವುದಿಲ್ಲ. ಹಿರಿಯ ಅಧಿಕಾರಿಗಳಿಂದ ಕೆಳಹಂತದ ಸಿಬ್ಬಂದಿಯವರೆಗೆ ಎಲ್ಲರ ಕಾರ್ಯವೈಖರಿಯನ್ನು ಗಮನಿಸಲಾಗುತ್ತಿದೆ.

ಪ್ರತಿಯೊಂದು ಕಾಮಗಾರಿ ಹಾಗೂ ಯೋಜನೆಯಲ್ಲಿ ಪಾರದರ್ಶಕತೆ ಕಾಪಾಡಲು ತಂತ್ರಜ್ಞಾನ ಬಳಸಬೇಕು. ಫಲಾನುಭವಿಗಳ ಆಧಾರ್, ಛಾಯಾಚಿತ್ರ ಹಾಗೂ ವಿಡಿಯೋ ಆಧಾರಿತ ದಾಖಲೆಗಳನ್ನು ನಮೂದಿಸಬೇಕು. ರಾಜ್ಯಾದ್ಯಂತ ಪಿಡಬ್ಲ್ಯುಡಿ, ಬಿಬಿಎಂಪಿ ಹಾಗೂ ಮಹಾನಗರ ಪಾಲಿಕೆಗಳ ವ್ಯಾಪ್ತಿಯ ದಾಖಲೆಗಳನ್ನು ಸ್ಕ್ಯಾನ್ ಮಾಡಿ ಡಿಜಿಟಲೀಕರಣಗೊಳಿಸಲಾಗುತ್ತಿದೆ ಎಂದರು.

ತಾಲೂಕು ಹಾಗೂ ಗ್ರಾಮ ಮಟ್ಟದ ಅಧಿಕಾರಿಗಳು, ಪಿಡಿಒ, ತಹಶೀಲ್ದಾರ್ ಮತ್ತು ವಿವಿಧ ಇಲಾಖೆಗಳ ಸಿಬ್ಬಂದಿಯ ಭೇಟಿ ಸಮಯ ಹಾಗೂ ಕಾರ್ಯಚಟುವಟಿಕೆಗಳನ್ನು ಹಿರಿಯ ಅಧಿಕಾರಿಗಳು ಪರಿಶೀಲಿಸುವ ವ್ಯವಸ್ಥೆ ಜಾರಿಗೆ ತರಲಾಗುತ್ತಿದೆ. ಸರ್ಕಾರಿ ಶಾಲೆಗಳು, ಆಸ್ಪತ್ರೆಗಳು ಹಾಗೂ ಆಶ್ರಮಗಳಿಗೆ ಅಧಿಕಾರಿಗಳು ನಿಯಮಿತವಾಗಿ ಭೇಟಿ ನೀಡಿ ಮೂಲಸೌಕರ್ಯ, ಬಿಸಿಯೂಟ ಹಾಗೂ ನಿರ್ವಹಣೆಯನ್ನು ಪರಿಶೀಲಿಸಬೇಕು ಎಂದು ಸೂಚಿಸಿದರು.ಎಸ್‌ಐಆರ್ ಪ್ರಕ್ರಿಯೆಯನ್ನು ಅತ್ಯಂತ ಅಚ್ಚುಕಟ್ಟಾಗಿ ನಡೆಸಬೇಕು. ಮುಂಬರುವ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮಗಳಲ್ಲಿ ಸರ್ಕಾರಿ ಶಾಲೆಗಳ ಜೊತೆಗೆ ಖಾಸಗಿ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳೂ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಬಿಇಒ ಹಾಗೂ ಡಿಡಿಪಿಐಗಳು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.ನಾವೆಲ್ಲರೂ 'ಟೀಮ್ ಕರ್ನಾಟಕ'ವಾಗಿ ಕೆಲಸ ಮಾಡಬೇಕು. ಪ್ರತಿಯೊಬ್ಬ ಸರ್ಕಾರಿ ನೌಕರರೂ ಜವಾಬ್ದಾರಿಯಿಂದ ಜನಸೇವೆಗೆ ಬದ್ಧರಾಗಿರಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕರೆ ನೀಡಿ-ದರು.ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಯವರು ವಿವಿಧ ಜಿಲ್ಲೆ ಮತ್ತು ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಸಂವಾದ ನಡೆಸಿ ಬರ ಪರಿಸ್ಥಿತಿ, ಬೆಳೆ ಹಾನಿ, ಕುಡಿಯುವ ನೀರಿನ ಸಮಸ್ಯೆ ಹಾಗೂ ಮೇವಿನ ಲಭ್ಯತೆ ಕುರಿತು ಮಾಹಿತಿ ಪಡೆದರು.ಈ ಸಂದರ್ಭದಲ್ಲಿ ಸಚಿವರಾದ ಪ್ರಿಯಾಂಕ್ ಖರ್ಗೆ, ಲಕ್ಷ್ಮಣ ಸವದಿ, ಸಂತೋಷ್ ಎಸ್. ಲಾಡ್, ಅಜಯ್ ಸಿಂಗ್, ವಿಜಯಾನಂದ ಕಾಶಪ್ಪನವರ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಸೇರಿದಂತೆ ವಿವಿಧ ಇಲಾಖೆಗಳ ಕಾರ್ಯದರ್ಶಿಗಳು, ಸಚಿವಾಲಯದ ಹಿರಿಯ ಅಧಿಕಾರಿಗಳು ಹಾಗೂ ಉನ್ನತಾಧಿಕಾರಿಗಳು ಉಪಸ್ಥಿತರಿದ್ದರು.ಬಳ್ಳಾರಿ ಜಿಲ್ಲೆಯಿಂದ ವಿಡಿಯೋ ಸಂವಾದದ ಮೂಲಕ ಜಿಲ್ಲಾಧಿಕಾರಿ ಕೆ. ನಾಗೇಂದ್ರ ಪ್ರಸಾದ್, ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ್ ಡಿ. ಪೆನ್ನೇಕರ್, ಬಳ್ಳಾರಿ ವಲಯ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ. ಕೆ.ಎನ್. ಬಸವರಾಜ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್. ಝುಬೇರ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು, ಸಿಬ್ಬಂದಿ ಭಾಗವಹಿಸಿದ್ದರು.

ಪ್ರಿಯ ಓದುಗರೇ, ಎಲ್ಲರೂ ನಮ್ಮ ಅನಂತ ಜನಶಕ್ತಿ ಕನ್ನಡ ದಿನ ಪತ್ರಿಕೆಯನ್ನು ತಪ್ಪದೇ ಓದಿರಿ

# ಬೋಗಸ್ ಬಿಲ್ ಮಾಡುವವರನ್ನು ಬಡಿದು ಹಾಕಿಬಿಡ್ತೀನಿ : ಸಿಎಂ ಡಿಕೆಶಿ

ನಡವಳಿಕೆ ಶುದ್ಧವಾಗಿರಬೇಕು. ನನ್ನ ವಿರುದ್ಧವೂ ಕೆಲ ಪ್ರಕರಣಗಳನ್ನು ದಾಖಲಿಸಲಾಗಿದೆ. ಆದರೆ ಅದ್ಯಾವುದಕ್ಕೂ ದಾಖಲೆಗಳಿಲ್ಲ ಎಂದರು.

ಪ್ರತಿಯೊಂದು ಯೋಜನೆ ಫಲಾನುಭವಿಯ ಮಾಹಿತಿ ಫೋಟೊ ಸಹಿತ ಲಭ್ಯವಿರಬೇಕು. ಕೆಲ ಎಂಜಿನಿಯರ್‌ಗಳು ಡಿ.ಕೆ.ಶಿವಕುಮಾರ್ ಮನೆಯಿಂದ ಲಕ್ಷ್ಮಣ ಸವದಿ ಮನೆಗೆ ರಸ್ತೆ ಅಭಿವದ್ಧಿ, ಲಕ್ಷ್ಮಣ ಸವದಿ ಮನೆಯಿಂದ ಡಿ.ಕೆ.ಶಿವಕುಮಾರ್ ಮನೆಗೆ ಮತ್ತೊಂದು ರಸ್ತೆ ಅಭಿವೃದ್ಧಿ ಎಂದು ಡಬಲ್ ಬಿಲ್, ಬೋಗಸ್ ಬಿಲ್ ತಯಾರು ಮಾಡುತ್ತಿದ್ದಾರೆ. ಇಂತಹ ಬೋಗಸ್ ಬಿಲ್, ಡಬಲ್ ಬಿಲ್‌ಗಳ ಬಗ್ಗೆ ಸಮಗ್ರ ತನಿಖೆ ಮಾಡಿಸುತ್ತೇನೆ. ನನ್ನ ವಿಚಾರ ಇನ್ನೂ ಗೊತ್ತಿಲ್ಲ, ಬಡಿದು ಹಾಕಿಬಿಡುತ್ತೇನೆ ಎಂದು ಖಡಕ್ ಎಚ್ಚರಿಕೆ ನೀಡಿದರು.

ಭ್ರಷ್ಟಾಚಾರ ತಡೆಯಲು ಮತ್ತು ಅಧಿಕಾರಿ ಸಿಬ್ಬಂದಿಗಳ ಚಲನಾವಲನಗಳ ಮೇಲೆ ನಿಗಾ ಇಡಲು ತಂತ್ರಜ್ಞಾನ ಬಳಸಿಕೊಳ್ಳಬೇಕು. ಕಾರ್ಯದರ್ಶಿಗಳು ಸೇರಿದಂತೆ ಹಿರಿಯ ಅಧಿಕಾರಿಗಳು ಜಿಲ್ಲೆಗಳಿಗೆ ಭೇಟಿ ನೀಡಿ-ದಾಗ ಆಸ್ಪತ್ರೆಗಳಿಗೆ ಭೇಟಿ ನೀಡಬೇಕು. ನ್ಯಾಯಬೆಲೆ ಅಂಗಡಿಗಳಲ್ಲಿ ವ್ಯವಸ್ಥೆಗಳನ್ನು ಸರಿಯಾಗಿ ಇರುವಂತೆ ನೋಡಿಕೊಳ್ಳಬೇಕು. ಕಂದಾಯ ಇಲಾಖೆಯಿಂದ ದಾಖಲೆಗಳನ್ನು ಕ್ರಮಬದ್ಧಗೊಳಿಸಬೇಕು.

ಅರೆ ನ್ಯಾಯಾಂಗದ ಸ್ಥಾನದಲ್ಲಿರುವ ಅಧಿಕಾರಿಗಳು ಯಾರ ಒತ್ತಡಕ್ಕೂ ಮಣಿಯದೇ ಆತಸಾಕ್ಷಿ ಅನುಗುಣವಾಗಿ ಉತ್ತಮ ಕೆಲಸ ಮಾಡಿ ಹುಷಾರಾಗಿರಿ ಎಂದು ಹೇಳಿದರು.ರಸ್ತೆ ಸುಧಾರಣೆ, ಸಾರ್ವಜನಿಕ ಸೌಲಭ್ಯಗಳು, ಹಸಿರು ಪರಿಸರ ರಕ್ಷಣೆ, ಬರ ನಿರ್ವಹಣೆ, ಪ್ರಕೃತಿವಿಕೋಪ ವಿಚಾರಗಳಲ್ಲಿ ತ್ವರಿತವಾಗಿ ಕೆಲಸ ಮಾಡಬೇಕು. ವಿಧಾನಸಭಾ ಅಧಿವೇಶನ ಬಳಿಕ ನಾನು ಪ್ರತಿ ಜಿಲ್ಲೆಗೂ ಭೇಟಿ ನೀಡುತ್ತೇನೆ. ಅಧಿಕಾರಿಗಳು, ಜನಪ್ರತಿನಿಧಿಗಳು, ಟೀಂ ಕರ್ನಾಟಕದಂತೆ ಕೆಲಸ ಮಾಡಬೇಕು. ಸರ್ಕಾರಿ ವಾಹನಗಳ ಬಳಕೆಗೆ ಪ್ರಮಾಣಿತ ಮಾರ್ಗಸೂಚಿಗಳನ್ನು ರೂಪಿಸುವುದಾಗಿ ಮುಖ್ಯಮಂತ್ರಿ ಹೇಳಿದರು.

ಪಂಚಖಾತ್ರಿ ಯೋಜನೆಗಳನ್ನು ತ್ಯಾಗ ಮಾಡುವುದಾಗಿ ಸರ್ಕಾರಿ ನೌಕರರ ಪರವಾಗಿ ಸಂಘದ ಅಧ್ಯಕ್ಷ ಷಡಕ್ಷರಿ ಭರವಸೆ ನೀಡಿದ್ದಾರೆ. ಶಕ್ತಿ ಯೋಜನೆ ಫಲಾನುಭವಿಗಳಿಗೆ ಸಾರ್ಟ್ ಕಾರ್ಡ್ ಪರಿಚಯಿಸಲಾಗುವುದು.

ರಾಜ್ಯದ ಮತದಾರರಲ್ಲದವರಿಗೆ ಸೌಲಭ್ಯ ನೀಡುವುದು ಸರಿಯಲ್ಲ. ಗೃಹಲಕ್ಷ್ಮಿ ಯೋಜನೆಯಡಿ ಮೃತಪಟ್ಟವರ ಹೆಸರಿಗೂ ಹಣ ಪಾವತಿಯಾಗಿದೆ. ಈ ಬಗ್ಗೆ ಖಚಿತ ಮಾಹಿತಿ ಪಡೆದುಕೊಳ್ಳಬೇಕು ಎಂದು ಹೇಳಿದರು.

ಸಚಿವರು ಪ್ರತಿ ತಿಂಗಳ ಮೊದಲ ಮತ್ತು ಮೂರನೇ ಶನಿವಾರ ಜನ ಸಂಪರ್ಕ ಸಭೆ ನಡೆಸಬೇಕು. ಶಾಸಕರು, ಸಚಿವರು ತಾಲ್ಲೂಕು ಮತ್ತು ಹೋಬಳ್ಳಿ ಮಟ್ಟದಲ್ಲೂ ಜನ ಸಂಪರ್ಕ ಸಭೆಗಳನ್ನು ನಡೆಸಬೇಕು. ವಿಬಿ-ಜಿರಾಮ್‌ಜಿ ಯೋಜನೆಯಡಿ ಸ್ಥಳೀಯವಾಗಿ ಉದ್ಯೋಗ ಕಲ್ಪಿಸಬೇಕು ಎಂದು ಹೇಳಿದರು.

ನಾಡಗೀತೆ ಗಾಯನ ಸಂದರ್ಭದಲ್ಲಿ ಎದ್ದು ನಿಂತು ಗೌರವ ಸಲ್ಲಿಸದ ಏಳು ತಾಲ್ಲೂಕುಗಳ ಅಧಿಕಾರಿಗಳನ್ನು ವಿಡಿಯೋ ಕಾನ್ಫರೆನ್‌ನಲ್ಲೆ ಗಮನಿಸಿದ ಮುಖ್ಯಮಂತ್ರಿಯವರು ತರಾಟೆಗೆ ತೆಗೆದುಕೊಂಡರು. ಕೆಲವು ತಾಲ್ಲೂಕುಗಳಲ್ಲಿ ಅಧಿಕಾರಿಗಳು ಗೈರು ಹಾಜರಿ ಕುರಿತು ಗಮನ ಹರಿಸುವಂತೆ ಹಿರಿಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜನ ಪ್ರತಿನಿಧಗಳಿಗೆ 5 ವರ್ಷಕ್ಕೊಮ್ಮೆ ಜನ ಅಂಕ ನೀಡುತ್ತಾರೆ. ಅದೇ ರೀತಿ ಕೆಲ ಅಧಿಕಾರಿಗಳಿಗೆ, ಹಿರಿಯ ಅಧಿಕಾರಿಗಳು ಮತ್ತು ನಮಗೆ ಅಂಕ ಬರೆಯುವ ಸಾಮರ್ಥ್ಯ ಇದೆ ಎಂಬುದನ್ನು ಮರೆಯಬಾರದು. ಶೇ.60ರಷ್ಟು ಅಧಿಕಾರಿ ಮತ್ತು ಸಿಬ್ಬಂದಿಗಳು ಕೇಂದ್ರ ಸ್ಥಾನದಲ್ಲಿಲ್ಲ ಎಂಬುದು ನನ್ನ ಗಮನಕ್ಕಿದೆ. ಇದನ್ನು ಸಹಿಸುವುದಿಲ್ಲ ಎಂದರು.

ಸಭೆಯಲ್ಲಿ ರಾಜ್ಯಾದ್ಯಂತ ತಾಲ್ಲೂಕು, ಜಿಲ್ಲಾ ಕೇಂದ್ರಗಳಿಂದ 750 ಪ್ಯಾನಲ್‌ಗಳಲ್ಲಿ ಅಧಿಕಾರಿಗಳು, ಸಿಬ್ಬಂದಿಗಳು ಮುಖ್ಯಮಂತ್ರಿಗಳ ವಿಡಿಯೋ ಕಾನ್ಫರೆನ್‌ನಲ್ಲಿ ಭಾಗವಹಿಸಿದರು.

ಕೆಲವು ಕಡೆ ಸಚಿವರು ಖುದ್ದು ಹಾಜರಿದ್ದರು. ಕುಣಿಗಲ್ ತಾಲ್ಲೂಕಿನಲ್ಲಿ ಬರ ಅಧ್ಯಯನದಲ್ಲಿ ತೊಡಗಿಸಿಕೊಂಡಿದ್ದ ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಸಂವಾದ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು. ಕೆಲವು ತಾಲ್ಲೂಕುಗಳ ಬರ ನಿರ್ವಹಣೆ ಕುರಿತು ಅಧಿಕಾರಿಗಳ ಜೊತೆ ಸಂವಾದ ನಡೆಸಿದರು.

# ಮಟ್ಕಾ : ನಾಲ್ವರ ಬಂಧನ, 8,650 ನಗದು ವಶ

ದಾವಣಗೆರೆ:- ಜಿಲ್ಲೆಯ ಎರಡು ಪ್ರತ್ಯೇಕ ಕಡೆಗಳಲ್ಲಿ ಕಾನೂನುಬಾಹಿರವಾಗಿ ನಡೆಯುತ್ತಿದ್ದ ಮಟ್ಕಾ ಜೂಜಾಟದ ಮೇಲೆ ಪೊಲೀಸರು ದಾಳಿ ನಡೆಸಿ ನಾಲ್ವರನ್ನು ವಶಕ್ಕೆ ಪಡೆದಿದ್ದಾರೆ. ದಾಳಿಯಲ್ಲಿ ಒಟ್ಟು 8,650 ನಗದು ಹಣವನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಹೊನ್ನಾಳಿ: ಹೊನ್ನಾಳಿ ಪೊಲೀಸ್ ಠಾಣೆ ವ್ಯಾಪ್ತಿಯ ಹನುಮಸಾಗರ ಗ್ರಾಮದ ಹೊನ್ನಾಳಿ-ತುಮ್ಮಿನಕಟ್ಟೆ ರಸ್ತೆಯ ಬದಿಯ ಸಾರ್ವಜನಿಕ ಸ್ಥಳದಲ್ಲಿ ಮಟ್ಕಾ ಜೂಜಾಟ ನಡೆಯುತ್ತಿರುವ ಬಗ್ಗೆ ಖಚಿತ ಮಾಹಿತಿ ಬಂದ ಹಿನ್ನೆಲೆಯಲ್ಲಿ ಸೋಮವಾರ ಸಂಜೆ ಪೊಲೀಸರು ದಾಳಿ ನಡೆಸಿದರು. ಜಿಲ್ಲಾ ಪೊಲೀಸ್ ಅಧೀಕ್ಷಕ ಶೇಖರ್ ಹೆಚ್.ಟಿ., ಐಪಿಎಸ್ ಅವರ ಮಾರ್ಗದರ್ಶನದಲ್ಲಿ ಎ.ಎನ್.ಟಿ.ಎಫ್ ತಂಡದ ಪೊಲೀಸ್ ನಿರೀಕ್ಷಕ ಕೆ.ಟಿ. ಅಣ್ಣಯ್ಯ ನೇತೃತ್ವದಲ್ಲಿ ಪಿಎಸ್‌ಐ ಸಾಗರ್ ಅತ್ತಾರ್ವಾಲ ಹಾಗೂ ಸಿಬ್ಬಂದಿ ಕಾರ್ಯಾಚರಣೆ ನಡೆಸಿದರು.

ಈ ವೇಳೆ ಮಟ್ಕಾ ಜೂಜಾಟದಲ್ಲಿ ತೊಡಗಿದ್ದ ಇಬ್ಬರನ್ನು ವಶಕ್ಕೆ ಪಡೆದು, ಜೂಜಾಟಕ್ಕೆ ಬಳಸುತ್ತಿದ್ದ 7,200 ನಗದನ್ನು ವಶಪಡಿಸಿಕೊಳ್ಳಲಾಗಿದೆ. ಈ ಕುರಿತು ಹೊನ್ನಾಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದ ಪೊಲೀಸ್ ನಿರೀಕ್ಷಕ ಅಣ್ಣಯ್ಯ ಕೆ.ಟಿ., ಪಿಎಸ್‌ಐ ಸಾಗರ್ ಅತ್ತಾರ್ವಾಲ ಹಾಗೂ ಸಿಬ್ಬಂದಿಗಳಾದ ಪ್ರಕಾಶ್, ಶಿವರಾಜ್ ಮತ್ತು ಗೋವಿಂದರಾಜ್ ಅವರನ್ನು ಜಿಲ್ಲಾ ಪೊಲೀಸ್ ಅಧೀಕ್ಷಕ ಶೇಖರ್ ಹೆಚ್.ಟಿ. ಹಾಗೂ ಹೆಚ್ಚುವರಿ ಪೊಲೀಸ್ ಅಧೀಕ್ಷಕ ಪರಮೇಶ್ವರ ಹೆಗಡೆ ಪ್ರಶಂಸಿಸಿದ್ದಾರೆ. ದಾವಣಗೆರೆ ನಗರ: ಮತ್ತೊಂದೆಡೆ, ಕೆಟಿಜೆ ನಗರ ಪೊಲೀಸ್ ಠಾಣೆ ವ್ಯಾಪ್ತಿಯ ಸಿದ್ದೇಶ್ವರ ಮಿಲ್ ಭಗತ್ ಸಿಂಗ್ ನಗರದ ಸಾರ್ವಜನಿಕ ಸ್ಥಳದಲ್ಲಿ ಮಟ್ಕಾ ಜೂಜಾಟ ನಡೆಯುತ್ತಿರುವ ಖಚಿತ ಮಾಹಿತಿ ಮೇರೆಗೆ ಪೊಲೀಸರು ದಾಳಿ ನಡೆಸಿದರು.

## ಇಂದು ಬಳ್ಳಾರಿಯಲ್ಲಿ ಉಚಿತ ಬೃಹತ್ ಆಯುಷ್ ಆರೋಗ್ಯ ಶಿಬಿರ

**ಬಳ್ಳಾರಿ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ ಹಾಗೂ ಶ್ರೀ ಅಲ್ಲೀಪುರ ಮಹಾದೇವ ತಾತನವರ ಟ್ರಸ್ಟ್ ಸಮಿತಿಯ ಸಹಯೋಗದಲ್ಲಿ ಆಗಸ್ಟ್ 12ರಂದು ಬೆಳಿಗ್ಗೆ 10 ಗಂಟೆಗೆ ಅಲ್ಲೀಪುರದ ಶ್ರೀ ಅಲ್ಲೀಪುರ ಮಹಾದೇವ ತಾತನವರ ಮಠದಲ್ಲಿ ಸಾರ್ವಜನಿಕರಿಗಾಗಿ ಉಚಿತ ಬೃಹತ್ ಆಯುಷ್ ಆರೋಗ್ಯ ತಪಾಸಣೆ ಮತ್ತು ಚಿಕಿತ್ಸಾ ಶಿಬಿರವನ್ನು ಆಯೋಜಿಸಲಾಗಿದೆ.**

**ಸಾರ್ವಜನಿಕರು ಈ ಉಚಿತ ಆರೋಗ್ಯ ತಪಾಸಣೆ ಹಾಗೂ ಚಿಕಿತ್ಸಾ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳುವಂತೆ ಜಿಲ್ಲಾ ಆಯುಷ್ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ**

# ವಂದೇ ಮಾತರಂಗೆ ಅಪಮಾನ

## ಅಪರಾಧವಾಗಿಸುವ ವಿಧೇಯಕಕ್ಕೆ ಮುರ್ಮು ಅಂಕಿತ

ಕಾನೂನಾಗಿ ಜಾರಿಗೆ ಬಂದಿದೆ.

ಲೋಕಸಭೆಯು ಜುಲೈ 30 ರಂದು ಈ ವಿಧೇಯಕವನ್ನು ಅಂಗೀಕರಿಸಿತ್ತು, ರಾಜ್ಯಸಭೆಯು ಒಂದು ದಿನ ಮುಂಚಿತವಾಗಿ(ಜುಲೈ 29) ಇದಕ್ಕೆ ಒಪ್ಪಿಗೆ ನೀಡಿತ್ತು. ಈ ಕಾನೂನು ವಂದೇ ಮಾತರಂಗೆ ರಾಷ್ಟ್ರಗೀತೆ 'ಜನ ಗಣ ಮನ'ದಷ್ಟೇ ಸಮಾನ ಸ್ಥಾನಮಾನವನ್ನು ನೀಡುತ್ತದೆ. ಈ ಹಿಂದೆ, ರಾಷ್ಟ್ರೀಯ ಗೌರವಕ್ಕೆ ಅಪಮಾನ ತಡೆ ಕಾಯಿದೆಯಲ್ಲಿ ಜನ ಗಣ ಮನ ಹಾಡುವುದನ್ನು ಉದ್ದೇಶಪೂರ್ವಕವಾಗಿ ತಡೆಯುವುದನ್ನು ಅಥವಾ ಅಂತಹ ಗಾಯನದಲ್ಲಿ ನಿರತರಾಗಿರುವ ಸಭೆಗೆ ಅಡಚಣೆ ಉಂಟುಮಾಡುವುದನ್ನು ಅಪರಾಧವೆಂದು ಪರಿಗಣಿಸಲಾಗಿತ್ತು. ಈ ಅಪರಾಧಗಳಿಗೆ ಮೂರು ವರ್ಷಗಳವರೆಗೆ ಜೈಲು ಶಿಕ್ಷೆ, ದಂಡ ಅಥವಾ ಎರಡನ್ನೂ ವಿಧಿಸಬಹುದಾಗಿತ್ತು, ಹಾಗೆಯೇ ಎರಡನೇ ಮತ್ತು ನಂತರದ ಪ್ರತಿಯೊಂದು ಅಪರಾಧಕ್ಕೆ ಕನಿಷ್ಠ ಒಂದು ವರ್ಷದ ಜೈಲು ಶಿಕ್ಷೆ ವಿಧಿಸಲಾಗುತ್ತಿತ್ತು. ಹಿಂದಿನ ಕಾಯ್ದೆಯು ವಂದೇ ಮಾತರಂಗೆ ಈ ರೀತಿಯ ರಕ್ಷಣೆಯನ್ನು ನೀಡಿರಲಿಲ್ಲ. ಹಾಗಾಗಿ, ಕಾಯ್ದೆಯ ಸೆಕ್ಷನ್ 3ಕ್ಕೆ ತಿದ್ದುಪಡಿ ತಂದು ವಂದೇ ಮಾತರಂ ಗೀತೆಯನ್ನೂ ಇದರ ವ್ಯಾಪ್ತಿಗೆ ಸೇರಿಸಲಾಗಿದೆ. ಈ ಬಾರಿಯ ಸ್ವಾತಂತ್ರ್ಯ ದಿನಾಚರಣೆಯ ಸಮಾರಂಭದಲ್ಲಿ ಇದೇ ಮೊದಲ ಬಾರಿಗೆ ಕೆಂಪುಕೋಟೆಯ ಮೇಲೆ ವಂದೇ ಮಾತರಂ ಹಾಡಲಾಗುವುದು ಎಂದು ಕೇಂದ್ರ ಗೃಹ ಸಚಿವಾಲಯ ತಿಳಿಸಿದೆ

# ಅರ್ಚಕರ ಪ್ರಶಿಕ್ಷಣ ಶಿಬಿರ ಉದ್ಘಾಟನೆ

**ಅನಂತ ಜನಶಕ್ತಿ ನ್ಯೂಸ್ :-**

ಚಿತ್ರದುರ್ಗ : ಧರ್ಮ ಎಂದರೆ ಬೆಳಕಿನ ಸತ್ಯಶೋಧನೆ. ಸಮಾಜವನ್ನು ಜ್ಞಾನದತ್ತ ಕೊಂಡೊಯ್ಯುವ ಧರ್ಮಕೇಂದ್ರಗಳಾಗಿ ದೇವಾಲಯ, ಗುಡಿ, ತೀರ್ಥಕ್ಷೇತ್ರ, ಧರ್ಮಕ್ಷೇತ್ರ ಹಾಗೂ ತಪೋಕ್ಷೇತ್ರಗಳು ವಿವಿಧ ನಾಮಗಳಲ್ಲಿ ಗುರುತಿಸಿಕೊಂಡಿವೆ" ಎಂದು ಜಗದ್ಗುರು ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿಯವರು ಅಭಿಪ್ರಾಯಪಟ್ಟರು.

ಶ್ರೀ ಜಗದ್ಗುರು ಸಿದ್ಧರಾಮೇಶ್ವರ ಮಹಾಸಂಸ್ಥಾನ ಭೋವಿ ಗುರುಪೀಠದಲ್ಲಿ ವಿಶ್ವ ಹಿಂದೂ ಪರಿಷದ್ ಆಯೋಜಿಸಲಾಗಿದ್ದ ಅರ್ಚಕರ ಪ್ರಶಿಕ್ಷಣ ಶಿಬಿರದಲ್ಲಿ ಭಾಗವಹಿಸಿ ಆಶೀರ್ವಚನ ನೀಡಿದ ಅವರು, ದೇವಾಲಯಗಳ ಇತಿಹಾಸ ಮತ್ತು ಅರ್ಚಕರ ಜವಾಬ್ದಾರಿಯ ಕುರಿತು ಮಾರ್ಮಿಕವಾಗಿ ಮಾತನಾಡಿದರು.

ದೇವಾಲಯಗಳು ವಿದ್ಯಾಕೇಂದ್ರಗಳಾಗಿದ್ದವು. ಪ್ರಾಚೀನ ಕಾಲದಲ್ಲಿ ದೇವಾಲಯಗಳು ಕೇವಲ ಪೂಜಾ ಸ್ಥಳಗಳಾಗಿರಲಿಲ್ಲ. ಅವು ಅಕ್ಷರ, ನೃತ್ಯ, ಸಂಗೀತ, ಶಿಲ್ಪಕಲೆ ಸೇರಿದಂತೆ ಸಕಲ ವಿದ್ಯೆಗಳನ್ನು ನೀಡುವ ವಿದ್ಯಾಕೇಂದ್ರಗಳಾಗಿದ್ದವು. ಅಂದಿನ ಕಾಲದ ಪೂಜಾರಿಗಳು, ಅರ್ಚಕರು ಹಾಗೂ ದೈವ ಉಪಾಸಕರು ಮಹಾನ್ ಜ್ಞಾನಿಗಳಾಗಿದ್ದರು. ಅವರ ಜ್ಞಾನಮಟ್ಟ ಉನ್ನತವಾಗಿದ್ದರಿಂದ ದೇವಾಲಯಗಳು ನ್ಯಾಯಾಲಯಗಳ ರೀತಿಯಲ್ಲಿ ಸಮಾಜದ ಸಮಸ್ಯೆಗಳನ್ನು ಬಗೆಹರಿಸುವ ಕೆಲಸ ಮಾಡುತ್ತಿದ್ದವು ಎಂದು ಶ್ರೀಗಳು ಸ್ಮರಿಸಿದರು.

ಜ್ಞಾನದ ಕೊರತೆಯೇ ಕಂದಾಚಾರಕ್ಕೆ ಕಾರಣ. ಕಾಲಕ್ರಮೇಣ ಬದಲಾದ ಪರಿಸ್ಥಿತಿಯ ಬಗ್ಗೆ ಕಳವಳ ವ್ಯಕ್ತಪಡಿಸಿದ ಶ್ರೀಗಳು, ಇತ್ತೀಚಿನ ದಿನಗಳಲ್ಲಿ ದೇವಾಲಯಗಳ ಸಂಖ್ಯೆ ಹೆಚ್ಚಾಗಿದೆಯಾದರೂ, ಅರ್ಚಕರಲ್ಲಿ ಜ್ಞಾನದ ಮಟ್ಟ ಇಳಿಮುಖವಾಗಿದೆ. ಇದರ ಪರಿಣಾಮವಾಗಿ ದೇವಾಲಯಗಳಲ್ಲಿ ಮೂಢನಂಬಿಕೆ, ಕಂದಾಚಾರ ಮತ್ತು ಶೋಷಣೆಗಳು ಮನೆಮಾಡುತ್ತಿವೆ. ನಮ್ಮ ಸನಾತನ ಪದ್ಧತಿಯಲ್ಲಿರುವ ವೈಜ್ಞಾನಿಕ ಮತ್ತು ವೈಚಾರಿಕ ಸತ್ಯಗಳ ಅರಿವಿನ ಕೊರತೆಯಿಂದಾಗಿ ಇಂದು ಮತಾಂತರದಂತಹ ಸವಾಲುಗಳೂ ಎದುರಾಗುತ್ತಿವೆ ಎಂದರು.

ಶಿಬಿರದ ಮುಖ್ಯ ಉದ್ದೇಶ ಈ ಎಲ್ಲಾ ಸಾಮಾಜಿಕ ಹಾಗೂ ಧಾರ್ಮಿಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವುದೇ ಈ ಅರ್ಚಕರ ಪ್ರಶಿಕ್ಷಣ ಶಿಬಿರದ ಮುಖ್ಯ ಉದ್ದೇಶ. ಈ ಶಿಬಿರವು ಪೂಜಾರಿಗಳನ್ನು ಜ್ಞಾನವಂತರನ್ನಾಗಿ, ಪ್ರಬುದ್ಧರನ್ನಾಗಿ ರೂಪಿಸಲು ಸಹಕಾರಿ. ವೈಜ್ಞಾನಿಕ ಮತ್ತು ವೈಚಾರಿಕ ತಳಹದಿಯ ಮೇಲೆ ಮೂಢನಂಬಿಕೆ ಹಾಗೂ ಕಂದಾಚಾರ ಮುಕ್ತ ಧಾರ್ಮಿಕ ಪದ್ಧತಿಯನ್ನು ಬೆಳೆಸಲು ಪ್ರತಿಯೊಬ್ಬ ಅರ್ಚಕರೂ ಶ್ರಮಿಸಬೇಕು" ಎಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಬಸವರಾಜ, ಷಡಕ್ಷರಪ್ಪ, ಚಂದ್ರಶೇಖರ, ಶಿಬಿರಾರ್ಥಿಗಳು ಉಪಸ್ಥಿತರಿದ್ದರು.



# ಬರದ ಬವಣೆಗೆ ಸರ್ಕಾರದ ಸ್ಪಂದನೆ:
## ಪಾವಗಡದಲ್ಲಿ ರೈತರಿಗೆ ಮೇವಿನ ಬೀಜ, ಹಾಲು ಉತ್ಪಾದಕರಿಗೆ ಚೆಕ್ ವಿತರಿಸಿದ ಡಿಸಿಎಂ ಪರಮೇಶ್ವರ್



ಪಾವಗಡ : ಬರ ಪರಿಸ್ಥಿತಿಯ ಪರಿಶೀಲನೆಗಾಗಿ ಪಾವಗಡಕ್ಕೆ ಭೇಟಿ ನೀಡಿದ ಉಪಮುಖ್ಯಮಂತ್ರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ್ ಅವರು ಶಾಸಕ ಹೆಚ್.ವಿ. ವೆಂಕಟೇಶ್ ಅವರೊಂದಿಗೆ ನಂದಿನಿ ಉಪಕೇಂದ್ರಕ್ಕೆ ಭೇಟಿ ನೀಡಿ ರೈತರಿಗೆ ಜೋಳದ ಮೇವಿನ ಬೀಜದ ಮಿನಿ ಕಿಟ್‌ಗಳನ್ನು ಹಾಗೂ ಹಾಲು ಉತ್ಪಾದಕರ ಸಂಘಗಳಿಗೆ ಚೆಕ್‌ಗಳನ್ನು ವಿತರಿಸಿದರು. ಬಳಿಕ ಮಾತನಾಡಿದ ಅವರು, ಮಳೆಯ ಕೊರತೆಯಿಂದ ಪಾವಗಡ ತಾಲೂಕಿನಲ್ಲಿ ಕಡಲೆಕಾಯಿ ಸೇರಿದಂತೆ ಬಹುತೇಕ ಬೆಳೆಗಳು ಸಂಪೂರ್ಣ ಹಾನಿಗೊಳಗಾಗಿದ್ದು, ಜಾನುವಾರುಗಳಿಗೆ ಮೇವಿನ ತೀವ್ರ ಕೊರತೆ ಉಂಟಾಗಿದೆ ಎಂದು ಹೇಳಿದರು. ಈ ಹಿನ್ನೆಲೆಯಲ್ಲಿ ತುಮಕೂರು ಹಾಲು ಒಕ್ಕೂಟದ (ಕೆಎಂಎಫ್) ವತಿಯಿಂದ ಜಿಲ್ಲಾದ್ಯಂತ 1 ಲಕ್ಷ ಮೇವಿನ ಮಿನಿ ಕಿಟ್‌ಗಳನ್ನು ವಿತರಿಸಲಾಗುತ್ತಿದೆ ಎಂದು ತಿಳಿಸಿದರು. ರೈತರು ಲಭ್ಯವಿರುವ ನೀರಿನ ಮೂಲಗಳನ್ನು ಬಳಸಿಕೊಂಡು ಮೇವಿನ ಬೆಳೆ ಬೆಳೆಯುವಂತೆ ಸಲಹೆ ನೀಡಿದರು.

ರಾಜ್ಯದಲ್ಲಿ ಕುಡಿಯುವ ನೀರಿನ ಸಮಸ್ಯೆ ಗಂಭೀರವಾಗಿರುವ ಹಿನ್ನೆಲೆಯಲ್ಲಿ ತುರ್ತು ಕಾಮಗಾರಿಗಳಿಗಾಗಿ ತುಮಕೂರು ಜಿಲ್ಲೆಗೆ 11 ಕೋಟಿ ಹಾಗೂ ಜಿಲ್ಲೆಯ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ತಲಾ 1 ಕೋಟಿ ಅನುದಾನವನ್ನು ಸರ್ಕಾರ ಬಿಡುಗಡೆ ಮಾಡಿದೆ ಎಂದು ಡಿಸಿಎಂ ತಿಳಿಸಿದರು.

# ಸರ್ಕಾರಿ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಡಿಸಿ ಸೂಚನೆ
## ಜನರಿಗೆ ಗುಣಮಟ್ಟದ ಸೇವೆ ನೀಡಲು ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು: ಕೆ. ನಾಗೇಂದ್ರ ಪ್ರಸಾದ್



**ಅನಂತ ಜನಶಕ್ತಿ ನ್ಯೂಸ್ :-**

ಬಳ್ಳಾರಿ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಾದ 'ಪ್ರಜಾಸೇವೆ', 'ಭಾರತ್ ಜೋಡೋ' ಸಂಘಗಳ ರಚನೆ ಹಾಗೂ ಮಾದಕ ದ್ರವ್ಯಗಳ ವಿರುದ್ಧದ ಜಾಗೃತಿ ಮತ್ತು ಕಾರ್ಯಾಚರಣೆ ಕಾರ್ಯಕ್ರಮಗಳಾದ 'ಬೇಡ ಬ್ರೋ' ಮತ್ತು 'ಆಪರೇಷನ್ ರೈಸ್'ಗಳನ್ನು ತಾಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ಜಿಲ್ಲಾಧಿಕಾರಿ ಕೆ. ನಾಗೇಂದ್ರ ಪ್ರಸಾದ್ ಅಧಿಕಾರಿಗಳಿಗೆ ಸೂಚಿಸಿದರು.

ಮಂಗಳವಾರ ಮುಖ್ಯಮಂತ್ರಿ ಅವರ ಕರ್ನಾಟಕ ಸರ್ಕಾರದ ನೌಕರರೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿದ ಬಳಿಕ ನಗರದ ಜಿಪಂ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳ ಸಭೆ ನಡೆಸಿ ಅವರು ಮಾತನಾಡಿದರು.

ಪ್ರತಿ ತಿಂಗಳ ಮೊದಲ ಹಾಗೂ ಮೂರನೇ ಶನಿವಾರದಂದು ತಾಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ 'ಪ್ರಜಾಸೇವೆ' ಆಂದೋಲನವನ್ನು ಕಡ್ಡಾಯವಾಗಿ ಆಯೋಜಿಸಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದರು.

ದೂರುಗಳ ಗುಣಮಟ್ಟದ ವಿಲೇವಾರಿಗೆ ಆದ್ಯತೆ :

ಸಾರ್ವಜನಿಕರಿಂದ ಸ್ವೀಕರಿಸುವ ಅರ್ಜಿಗಳನ್ನು ಕೇವಲ ಮೇಲಧಿಕಾರಿಗಳಿಗೆ ರವಾನಿಸಿ ವಿಲೇವಾರಿ ಮಾಡಲಾಗಿದೆ ಎಂದು ತೋರಿಸುವುದರಿಂದ ಸಮಸ್ಯೆ ಪರಿಹಾರವಾಗುವುದಿಲ್ಲ. ಸಾರ್ವಜನಿಕರ ಕುಂದುಕೊರತೆಗಳಿಗೆ ನೈಜ ಹಾಗೂ ಗುಣಮಟ್ಟದ ಪರಿಹಾರ ಒದಗಿಸಿದ ನಂತರವೇ ಅರ್ಜಿಗಳನ್ನು ವಿಲೇವಾರಿ ಮಾಡಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

'ಪ್ರಜಾಸೇವೆ' ಆಂದೋಲನ ನಡೆಯುವ ಶನಿವಾರಗಳಂದು ಜಿಲ್ಲಾಧಿಕಾರಿ ಸೇರಿದಂತೆ ಎಲ್ಲಾ ತಾಲೂಕು ಮಟ್ಟದ ಅಧಿಕಾರಿಗಳು ಕಡ್ಡಾಯವಾಗಿ ಕೇಂದ್ರ ಸ್ಥಾನದಲ್ಲಿದ್ದು ಸಾರ್ವಜನಿಕರಿಗೆ ಲಭ್ಯವಿರಬೇಕು ಎಂದು ನಿರ್ದೇಶನ ನೀಡಿದರು.

ಇಲಾಖೆಗಳ ಸಮನ್ವಯದಿಂದ ಕಾರ್ಯ ತ್ವರಿತಗೊಳಿಸಿ :

ಕಂದಾಯ ಹಾಗೂ ನಗರಾಭಿವೃದ್ಧಿ ಇಲಾಖೆಗಳು ಜಂಟಿಯಾಗಿ ಎಸ್‌ಐಆರ್ ಪ್ರಕ್ರಿಯೆ ಕೈಗೊಂಡಿದ್ದು, ಈಗಾಗಲೇ ಹಲವು ಅಸಂಗತತೆಗಳನ್ನು ಕಡಿಮೆ ಮಾಡಲಾಗಿದೆ. ಸಾರ್ವಜನಿಕರಿಂದ ಸ್ವೀಕರಿಸಲಾದ ಅರ್ಜಿಗಳಲ್ಲಿನ ದೋಷಗಳನ್ನು ಸರಿಪಡಿಸಲು ಜಂಟಿ ಕ್ರಿಯಾ ಯೋಜನೆ ರೂಪಿಸಿ ಪ್ರಕ್ರಿಯೆ ಮುಂದುವರಿಸಲಾಗುತ್ತಿದೆ. ಈ ಕಾರ್ಯವನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿ ಸೂಚಿಸಿದರು.

ಮಾದಕ ದ್ರವ್ಯಗಳ ವಿರುದ್ಧ ಪರಿಣಾಮಕಾರಿ ಕಾರ್ಯಾಚರಣೆ :

ಗೃಹ ಸಚಿವರ ನಿರ್ದೇಶನದಂತೆ 'ನಶಾ ಮುಕ್ತ ಭಾರತ' ಅಭಿಯಾನದಡಿ ಜಿಲ್ಲೆಯಲ್ಲಿ 'ಆಪರೇಷನ್ ರೈಸ್' ಮತ್ತು 'ಬೇಡ ಬ್ರೋ' ಎಂಬ ಎರಡು ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಅಬಕಾರಿ, ಪೊಲೀಸ್ ಹಾಗೂ ಸಂಬಂಧಪಟ್ಟ ಇತರ ಇಲಾಖೆಗಳು ಜಂಟಿಯಾಗಿ ಉತ್ತಮ ಸಾಧನೆ ಮಾಡಿದ್ದು, ಮುಂದಿನ ದಿನಗಳಲ್ಲಿಯೂ ಈ ಕಾರ್ಯಾಚರಣೆಗಳನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಮುಂದುವರಿಸಬೇಕು ಎಂದು ತಿಳಿಸಿದರು.ಅಧಿಕಾರಿಗಳು ತಮ್ಮ ಇಲಾಖೆಯ ಕಾರ್ಯಗಳಿಗೆ ಮಾತ್ರ ಸೀಮಿತವಾಗದೆ, ಸಾರ್ವಜನಿಕ ಹಿತದೃಷ್ಟಿಯಿಂದ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಸಾರ್ವಜನಿಕರ ಹಿತಕ್ಕಾಗಿ ನೀಡಲಾಗುವ ಹೆಚ್ಚುವರಿ ಜವಾಬ್ದಾರಿಗಳನ್ನು ವಹಿಸಿಕೊಳ್ಳುವ ಮನೋಭಾವ ಬೆಳೆಸಿಕೊಳ್ಳಬೇಕು. ಎಲ್ಲಾ ಇಲಾಖೆಗಳ ನಡುವಿನ ಸಮನ್ವಯದಿಂದ ಜಿಲ್ಲೆಯಲ್ಲಿ ಉತ್ತಮ ಆಡಳಿತ ನೀಡಲು ಒಗ್ಗಟ್ಟಿನಿಂದ ಶ್ರಮಿಸಬೇಕು ಎಂದು ಜಿಲ್ಲಾಧಿಕಾರಿ ಕರೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ್, ಬಳ್ಳಾರಿ ವಲಯ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ. ಕೆ.ಎನ್. ಬಸವರಾಜ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್. ಜುಬೇರ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# ಮುಳವಾಡ ಏತ ನೀರಾವರಿ ಯೋಜನೆ:
## ರೈತರ ಸಮಸ್ಯೆ ಪರಿಹರಿಸದಿದ್ದರೆ ಹೋರಾಟದ ಎಚ್ಚರಿಕೆ



**ಅನಂತ ಜನಶಕ್ತಿ ನ್ಯೂಸ್ :-**

ಬಬಲೇಶ್ವರ : ಆಲಮಟ್ಟಿ ಲಾಲ್ ಬಹದ್ದೂರ್ ಶಾಸ್ತ್ರಿ ಜಲಾಶಯದ ವ್ಯಾಪ್ತಿಗೆ ಬರುವ ಮುಳವಾಡ ಏತ ನೀರಾವರಿ ಯೋಜನೆಯ ಪಶ್ಚಿಮ ಕಾಲುವೆ ವ್ಯಾಪ್ತಿಯ ಬಬಲೇಶ್ವರ ತಾಲೂಕಿನ ಹೆಬ್ಬಾಳಟ್ಟಿ, ಹೊಕ್ಕುಂಡಿ, ಯಕ್ಕುಂಡಿ, ಅರ್ಜುಣಗಿ ಹಾಗೂ ತೊದಲಬಾಗಿ ಗ್ರಾಮಗಳಿಗೆ ಸಮರ್ಪಕವಾಗಿ ನೀರು ತಲುಪಿಸಲು ಕಾಲುವೆಯ ಕೊನೆ ಅಂಚಿನವರೆಗೆ ನೀರು ಹರಿಸಬೇಕು ಎಂದು ಅಖಂಡ ಕರ್ನಾಟಕ ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಆಗ್ರಹಿಸಿದರು.

ಮಂಗಳವಾರ ಬಬಲೇಶ್ವರ ತಾಲೂಕಿನ ಅರ್ಜುಣಗಿ ಗ್ರಾಮದ ಶ್ರೀ ಸಿದ್ದರಾಮೇಶ್ವರ ದೇವಸ್ಥಾನದಿಂದ ಹೆಚ್ಚಿನ ಸಂಖ್ಯೆಯಲ್ಲಿ ಸೇರಿದ್ದ ರೈತರು ರೈತ ಜಾಥಾ ನಡೆಸಿ, ಹಳೆ ಗ್ರಾಮ ಪಂಚಾಯಿತಿ ಆವರಣದಲ್ಲಿ ಅಖಂಡ ಕರ್ನಾಟಕ ರೈತ ಸಂಘ ಹಾಗೂ ಕರ್ನಾಟಕ ರಾಜ್ಯ ರೈತ ಸಂಘ ಜಂಟಿಯಾಗಿ ಹಮ್ಮಿಕೊಂಡಿದ್ದ ಧರಣಿಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಮುಳವಾಡ ಏತ ನೀರಾವರಿ ಯೋಜನೆಯ ಪಶ್ಚಿಮ ಕಾಲುವೆ ನಿರ್ಮಾಣವಾಗಿ ನೀರು ಹರಿಸಿದರೂ ಕಾಲುವೆಯ ಕೊನೆ ಅಂಚಿನವರೆಗೆ ನೀರು ತಲುಪಿದ ಉದಾಹರಣೆ ಇಲ್ಲ. ಇದರಿಂದ ಐದು ಗ್ರಾಮಗಳ ರೈತರು ಬೆಳೆದ ಬೆಳೆಗಳಿಗೆ ನೀರಿಲ್ಲದೆ, ಜಾನುವಾರುಗಳಿಗೂ ನೀರಿನ ಕೊರತೆ ಎದುರಿಸುವಂತಾಗಿದೆ ಎಂದು ಅವರು ದೂರಿದರು.

ಕಾಲುವೆ ಕೊನೆ ಅಂಚಿನವರೆಗೆ ನೀರು ತಲುಪಿಸುವಲ್ಲಿ ಕೆಬಿಜೆಎನ್‌ಎಲ್ ಅಧಿಕಾರಿಗಳ ಪಾತ್ರವೇನು ಎಂದು ಪ್ರಶ್ನಿಸಿದ ಅರವಿಂದ ಕುಲಕರ್ಣಿ, ಕೂಡಲೇ ಕಾಲುವೆಯ ಕೊನೆ ಭಾಗದವರೆಗೆ ನೀರು ತಲುಪಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಆಲಮಟ್ಟಿ ಜಲಾಶಯದಿಂದ ಬಳ್ಳಾರಿ ಜಿಂದಾಲ್‌ವರೆಗೆ ಯಾವುದೇ ಅಡತಡೆ ಇಲ್ಲದೆ ನಿರಂತರವಾಗಿ ನೀರು ಹರಿಸಲಾಗುತ್ತಿದೆ. ಆದರೆ ಸಮೀಪದಲ್ಲೇ ಇರುವ ಗ್ರಾಮಗಳಿಗೆ ನೀರು ಒದಗಿಸುವಲ್ಲಿ ಸರ್ಕಾರ ಹಾಗೂ ಅಧಿಕಾರಿಗಳು ವಿಫಲರಾಗಿದ್ದಾರೆ ಎಂದು ಆರೋಪಿಸಿದ ಅವರು, ಸರ್ಕಾರದ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳ ನಿರ್ಲಕ್ಷ್ಯ ಧೋರಣೆ ಇದರಿಂದ ಸ್ಪಷ್ಟವಾಗಿ ಗೋಚರಿಸುತ್ತಿದೆ. ಕಾಲುವೆಯ ಕೊನೆ ಅಂಚಿನವರೆಗೆ ನೀರು ಹರಿಸಲು ಯಾವುದೇ ತಾಂತ್ರಿಕ ಸಮಸ್ಯೆಗಳಿದ್ದರೂ ಅಧಿಕಾರಿಗಳು ಹಗಲಿರುಳು ಕಾರ್ಯನಿರ್ವಹಿಸಿ ಪರಿಹಾರ ಕಂಡುಕೊಳ್ಳಬೇಕು. ರೈತರಿಗೆ ನೀರು ಒದಗಿಸುವುದು ಸರ್ಕಾರದ ಕರ್ತವ್ಯ ಎಂದು ಹೇಳಿದರು.

ಕಾಲುವೆಯ ಕೊನೆ ಅಂಚಿನವರೆಗೆ ನೀರು ಹರಿಸದಿದ್ದರೆ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು. ವಿಳಂಬ ನೀತಿ ಅನುಸರಿಸಿದರೆ ಹೋರಾಟದ ಸ್ವರೂಪವನ್ನೇ ಬದಲಿಸಬೇಕಾಗುತ್ತದೆ ಎಂದು ಅರವಿಂದ ಕುಲಕರ್ಣಿ ಎಚ್ಚರಿಸಿದರು.

# ವಿಜಯಪುರ ನಗರದಲ್ಲಿ 2.09 ಲಕ್ಷ ಗಣತಿ ನಮೂನೆ ಡಿಜಿಟೈಜ್
## ಆ.17ರೊಳಗೆ ಬಿಎಲ್‌ಒಗಳಿಗೆ ಮನೆಮನೆ ಭೇಟಿ ವೇಳೆ ಪಡೆದ ನಮೂನೆ ಹಿಂತಿರುಗಿಸಲು ಮನವಿ



**ಅನಂತ ಜನಶಕ್ತಿ ನ್ಯೂಸ್ :-**

ವಿಜಯಪುರ, : ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯಕ್ಕೆ ಸಂಬಂಧಿಸಿದಂತೆ ವಿಜಯಪುರ ನಗರ ಮತಕ್ಷೇತ್ರದಲ್ಲಿ ಮತಗಟ್ಟೆ ಅಧಿಕಾರಿಗಳು ಆ.17ರವರೆಗೆ ಮನೆಮನೆ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ ಎಂದು ಮತದಾರರ ನೋಂದಣಾಧಿಕಾರಿಯೂ ಆಗಿರುವ ಪಾಲಿಕೆ ಆಯುಕ್ತ ವಿಜಯ ಮೆಕ್ಕಳಕಿ ತಿಳಿಸಿದ್ದಾರೆ. ಪಾಲಿಕೆ ಸಭಾಂಗಣದಲ್ಲಿ ರಾಜಕೀಯ ಪಕ್ಷಗಳ ಮುಖಂಡರೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆ.24ರಂದು ಕರಡು ಮತದಾರರ ಪಟ್ಟಿ ಪ್ರಕಟವಾಗಲಿದ್ದು, ಆ.24ರಿಂದ ಸೆ.23ರವರೆಗೆ ಮತದಾರರು ತಮ್ಮ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಬಹುದು. ಆ.24ರಿಂದ ಅ.22ರವರೆಗೆ ಸ್ವೀಕರಿಸಲಾದ ಆಕ್ಷೇಪಣೆ ಹಾಗೂ ಹಕ್ಕುಗಳನ್ನು ಪರಿಶೀಲಿಸಲಾಗುವುದು. ಬಳಿಕ ಅ.27ರಂದು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು ಎಂದು ತಿಳಿಸಿದರು. ಎಸ್‌ಐಆರ್‌ಗೆ ಸಂಬಂಧಿಸಿದಂತೆ ಆ.11ರ ಸಂಜೆ 4 ಗಂಟೆಯವರೆಗೆ ವಿಜಯಪುರ ನಗರದಲ್ಲಿ ಒಟ್ಟು 2,90,479 ಗಣತಿ ನಮೂನೆಗಳನ್ನು ಮತದಾರರಿಗೆ ವಿತರಿಸಲಾಗಿದೆ.

# ಸಾಂಸ್ಕೃತಿಕ ವೈಭವ ಮೆರೆದ ಎಕ್ಸಲೆಂಟ್ ಶಾಲಾ ವಿದ್ಯಾರ್ಥಿಗಳು

**ಅನಂತ ಜನಶಕ್ತಿ ನ್ಯೂಸ್ :-**

ವಿಜಯಪುರ ಉಜ್ಜಯಿನಿಯಲ್ಲಿ ಜೂ.23ರಂದು ನಡೆದ 'ಉಜ್ಜಯಿನಿ ಉತ್ಸವ-2026'ರಲ್ಲಿ ನಗರದ ಎಕ್ಸಲೆಂಟ್ ಕನ್ನಡ ಮಾಧ್ಯಮ ಶಾಲೆ, ಆದರ್ಶ ನಗರ ಬಡಾವಣೆಯ ವಿದ್ಯಾರ್ಥಿಗಳು ಭಾಗವಹಿಸಿ ತಮ್ಮ ಸಾಂಸ್ಕೃತಿಕ ಪ್ರತಿಭೆಯನ್ನು ಅನಾವರಣಗೊಳಿಸಿದರು.

ಕಿರಿಯರ ಭರತನಾಟ್ಯ ವಿಭಾಗದಲ್ಲಿ ಶಾಲೆಯ ವಿದ್ಯಾರ್ಥಿನಿ ಕುಮಾರಿ ಶ್ರದ್ಧಾ ಆಸಂಗಿ ಪ್ರಥಮ ಸ್ಥಾನ ಪಡೆದು ಗಮನ ಸೆಳೆದರು. ಪ್ರೌಢ ವಿಭಾಗದಲ್ಲಿ ಕುಮಾರಿ ಸ್ವಾತಿ ಗದ್ದನಕೇರಿ ಹಾಗೂ ಕುಮಾರಿ ಸುಕನ್ಯಾ ಹರನಾಳ ಪ್ರಥಮ ಸ್ಥಾನ ಗಳಿಸಿ ಶಾಲೆಗೆ ಕೀರ್ತಿ ತಂದಿದ್ದಾರೆ. ವಿದ್ಯಾರ್ಥಿಗಳ ಈ ಸಾಧನೆಗೆ ಶಾಲೆಯ ಅಧ್ಯಕ್ಷ ಬಸವರಾಜ ಕೌಲಗಿ, ಗೌರವ ಸದಸ್ಯ ರಾಜಶೇಖರ ಕೌಲಗಿ, ಮುಖ್ಯಗುರುಗಳಾದ ಎಂ.ಐ. ಬಿರಾದಾರ ಹಾಗೂ ಜೆ.ಆರ್. ಗುಡ್ಡದ, ಶಿಕ್ಷಕ-ಶಿಕ್ಷಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಹರ್ಷ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ. ವಿದ್ಯಾರ್ಥಿಗಳ ಸಾಂಸ್ಕೃತಿಕ ಪ್ರತಿಭೆಗೆ ಸೂಕ್ತ ವೇದಿಕೆ ಕಲ್ಪಿಸಿ, ಅವರ ಕಲಾ ಪ್ರತಿಭೆಯನ್ನು ಪ್ರೋತ್ಸಾಹಿಸುತ್ತಿರುವ ಶಾಲೆಯ ಆಡಳಿತ ಮಂಡಳಿ ಹಾಗೂ ಶಿಕ್ಷಕರ ಕಾರ್ಯಕ್ಕೆ ಪೋಷಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.



# ಸರ್ಕಾರಿ ನೌಕರರು ಸರ್ಕಾರದ ನಾಡಿಮಿಡಿತ; ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

## ನೂತನ ಸರ್ಕಾರದ ಆಶಯಗಳನ್ನು ಬಿಚ್ಚಿಟ್ಟ ಸಿಎಂ



**ಅನಂತ ಜನಶಕ್ತಿ ನ್ಯೂಸ್ :-**

**ವಿಜಯನಗರ** : ಕರ್ನಾಟಕ ರಾಜ್ಯದ ಇತಿಹಾಸದಲ್ಲಿ ಮೊದಲ ಬಾರಿಗೆ ರಾಜ್ಯದ ಹೋಬಳಿಯಿಂದ ಜಿಲ್ಲಾಮಟ್ಟದ ಎಲ್ಲಾ ಹಂತದ ರಾಜ್ಯ ಸರಕಾರಿ ನೌಕರರು ಮತ್ತು ಅಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ನೇರ ಸಂವಾದ ಮಾಡಿ ನೂತನ ರಾಜ್ಯ ಸರ್ಕಾರದ ಆಶಯಗಳನ್ನು ಮಾನ್ಯ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ ಅವರು ಬಿಚ್ಚಿಟ್ಟರು.

ಜಿಲ್ಲಾಡಳಿತ ವತಿಯಿಂದ ಇಂದು (ಆ.11) ಬೆಳಗ್ಗೆ ನಗರದ ಜಿಲ್ಲಾ ಒಳಾಂಗಣ ಕ್ರೀಡಾಂಗಣ ಸಭಾಂಗಣದಲ್ಲಿ ಕರ್ನಾಟಕ ಸರ್ಕಾರದ ನೌಕರರೊಂದಿಗೆ ವಿಡಿಯೋ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮುಖ್ಯಮಂತ್ರಿಗಳು ಮಾತನಾಡಿದರು. ರಾಜ್ಯ 750 ಸ್ಥಳಗಳಿಂದ ವಿಡಿಯೋ ಕಾನ್ಫರೆನ್ಸ್ ಮೂಲಕ ಹಾಜರಾಗಿದ್ದ ಸುಮಾರು 5.50 ಲಕ್ಷ ರಾಜ್ಯ ಸರ್ಕಾರಿ ನೌಕರರನ್ನು ಉದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿಗಳು, ಸರ್ಕಾರಿ ನೌಕರರು ಸರಕಾರ ಮತ್ತು ಸಾರ್ವಜನಿಕರ ಮದ್ಯದ ಸೇತುವೆಯಾಗಿದ್ದಾರೆ. ಸರ್ಕಾರದ ಎಲ್ಲ ಜನ ಕಲ್ಯಾಣ, ಅಭಿವೃದ್ಧಿ ಕಾರ್ಯಕ್ರಮಗಳನ್ನು ಅರ್ಹರಿಗೆ ತಲುಪಿಸುವ ಮತ್ತು ರಾಜ್ಯದ ಅಭಿವೃದ್ಧಿಗೆ ಪೂರಕವಾಗಿ ಶ್ರಮಿಸುವ ಶಕ್ತಿಯಾಗಿದ್ದಾರೆ ಎಂದರು.

ಜನರೊಂದಿಗಿನ ರಾಜ್ಯ ಸರ್ಕಾರಿ ನೌಕರರು ತೋರುವ ಸ್ಪಂದನೆ, ನಡುವಳಿಕೆಗಳು ಸರ್ಕಾರದ ಸದಾಭಿಪ್ರಾಯದ ಸಂಕೇತವಾಗಿವೆ. ಪ್ರತಿಯೊಬ್ಬ ಅಧಿಕಾರಿ, ಸಿಬ್ಬಂದಿಗಳು ತಮ್ಮ ಕೇಂದ್ರ ಸ್ಥಾನದಲ್ಲಿದ್ದು ಕರ್ತವ್ಯ ನಿರ್ವಹಿಸಬೇಕು ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ನೋಂಗ್ಜಾಯ್ ಮಹ್ಮದ್ ಅಲಿ ಅಕ್ರಂ ಷಾ ಅವರು ಮಾಹಿತಿ ನೀಡಿ ಮಾತನಾಡಿ, ಮಳೆ ಅಭಾವದಿಂದ ಜಿಲ್ಲೆಯಲ್ಲಿ ಉಂಟಾಗಿರುವ ಬರ ಪರಿಸ್ಥಿತಿಯನ್ನು ನಿರ್ವಹಿಸಲು ಜಿಲ್ಲಾ ಪಂಚಾಯತ್ ವತಿಯಿಂದ ವಿವಿಧ ರೀತಿಯ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ. ವಿಬಿ ರಾಮ್ ಜಿ ಕಾರ್ಯಕ್ರಮದ ಮೂಲಕ ಗ್ರಾಮೀಣ ಭಾಗದಲ್ಲಿ ಉದ್ಯೋಗ ಬಯಸುವ ಸಾರ್ವಜನಿಕರಿಗೆ ಕೂಲಿ ಕೆಲಸ ನೀಡಲಾಗುತ್ತಿದೆ. ಕೂಲಿ ನಿರ್ವಹಿಸಿರುವ ಕಾರ್ಮಿಕರಿಗೆ ಭತ್ಯೆ ನೀಡಲು ಕ್ರಮ ವಹಿಸಲಾಗಿದೆ. ಗ್ರಾಮೀಣ ಜನರು ಗುಳೆ ಹೋಗದಂತೆ ಮತ್ತು ಉದ್ಯೋಗ ಅರಸಿ ವಲಸೆ ಹೋಗದಂತೆ ಗ್ರಾಮ ಪಂಚಾಯತಿಗಳ ಮೂಲಕ ಜನ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಿ ಯೋಜನೆಗಳ ಬಗ್ಗೆ ಅರಿವು ಮೂಡಿಸಲಾಗುತ್ತಿದೆ. ಮಕ್ಕಳ ಶೈಕ್ಷಣಿಕ ಕಾರ್ಯಗಳಿಗೆ ತೊಂದರೆಯಾಗದಂತೆ ಹಾಸ್ಟೆಲ್ ಹಾಗೂ ಇತರೆ ಸೌಲಭ್ಯಗಳನ್ನು ಕಲ್ಪಿಸಲಾಗಿದೆ ಎಂದು ಅವರು ತಿಳಿಸಿದರು.

ಮಾನ್ಯ ಮುಖ್ಯಮಂತ್ರಿಗಳು ಹಾಗೂ ಉಪ ಮುಖ್ಯಮಂತ್ರಿಗಳು ಹೊಸಪೇಟೆ ವಿಧಾನಸಭಾ ಮತ ಕ್ಷೇತ್ರದಲ್ಲಿ ಆಗುತ್ತಿರುವ ಎಸ್‌ಐಆರ್ (ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ) ಕಾರ್ಯದ ಪ್ರಗತಿಯ ಬಗ್ಗೆ ಹೊಸಪೇಟೆ ತಹಶೀಲ್ದಾರ್‌ರಿಂದ ಮಾಹಿತಿ ಕೇಳಿದರು.

ಹೊಸಪೇಟೆ ತಹಶೀಲ್ದಾರ್ ಅವರು ಮಾತನಾಡಿ, ಹೊಸಪೇಟೆ ವಿಧಾನಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಒಟ್ಟು 2,52,288 ಮತದಾರರಿದ್ದು, ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯು ಪ್ರಗತಿಯಲ್ಲಿದೆ. ಮತದಾರರ ಪಟ್ಟಿಯಲ್ಲಿ ಹೆಸರಿರುವ ಮತದಾರರ ಗೈರು, ಸ್ಥಳಾಂತರ ಹಾಗೂ ಮೃತರು ಸೇರಿದಂತೆ ಎಲ್ಲ ಅಂಶಗಳನ್ನು ಭಾರತ ಚುನಾವಣಾ ಆಯೋಗವು ನೀಡಿರುವ ಮಾರ್ಗಸೂಚಿಗಳ ಅನ್ವಯ ಪರಿಶೀಲಿಸಲಾಗುತ್ತಿದೆ ಎಂದು ಅವರು ಹೇಳಿದರು.

ಅರ್ಹ ಮತದಾರರ ಹೆಸರು ಪಟ್ಟಿಯಿಂದ ಕೈಬಿಟ್ಟು ಹೋಗದಂತೆ ಎಚ್ಚರ ವಹಿಸಲು ಹಾಗೂ ಉಳಿದ ಕಾಲಾವಧಿಯಲ್ಲಿ ಬಿಎಲ್‌ಒಗಳು ಮನೆ ಮನೆಗೆ ತೆರಳಿ ಪರಿಶೀಲಿಸಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಮತ್ತು ರಾಜಕೀಯ ಪಕ್ಷದ ಪ್ರತಿನಿಧಿಗಳೊಂದಿಗೆ ಕಾಲಕಾಲಕ್ಕೆ ಸಭೆ ಜರುಗಿಸಿ ಸಹಕಾರ ನೀಡಲು ಮಾಹಿತಿ ಹಂಚಿಕೊಳ್ಳಲಾಗುತ್ತಿದೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್. ಜಾಹ್ನವಿ, ಅರಣ್ಯ ಇಲಾಖೆ ಉಪ ಸಂರಕ್ಷಣಾಧಿಕಾರಿ ಅನುಪಮ, ಅಪರ ಜಿಲ್ಲಾಧಿಕಾರಿ ಈ.ಬಾಲಕೃಷ್ಣ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮನೋಹರ್, ಉಪವಿಭಾಗಾಧಿಕಾರಿ ವಿವೇಕಾನಂದ, ನಗರಸಭೆ ಪೌರಾಯುಕ್ತ ಎರಗುಡಿ ಶಿವಕುಮಾರ್, ತಾಲೂಕು ಪಂಚಾಯತ್ ಮುಖ್ಯಕಾರ್ಯನಿರ್ವಹಕ ಅಧಿಕಾರಿ ಆಲಂ ಭಾಷಾ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸರ್ಕಾರಿ ನೌಕರರು ಇದ್ದರು.

## ನಾನು, ಸಚಿವರು ಸೇರಿ ಎಲ್ಲರೂ ಸರ್ಕಾರಿ ನೌಕರರು




**ಅನಂತ ಜನಶಕ್ತಿ ನ್ಯೂಸ್ :-**

**ಹಾವೇರಿ** : "ನಾನು ಸೇರಿದಂತೆ ನನ್ನ ಮಂತ್ರಿ ಮಂಡಲ, ಅಧಿಕಾರಿಗಳು ಎಲ್ಲರೂ ಸರ್ಕಾರಿ ನೌಕರರು. ನಮ್ಮದು ಟೀಮ್ ಕರ್ನಾಟಕ. ಎಲ್ಲರೂ ಒಟ್ಟಾಗಿ ಕೆಲಸ ಮಾಡೋಣ. ಜನರ ಸಮಸ್ಯೆಗಳಿಗೆ ಸ್ಪಂದಿಸಿ ಅವರ ಕಲ್ಯಾಣ ಮಾಡುವುದೇ ನಮ್ಮ ಗುರಿ" ಎಂದು ಸಿ.ಎಂ. ಡಿ ಕೆ ಶಿವಕುಮಾರ್ ಅವರು ಕರೆ ಕೊಟ್ಟರು.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಮಂಗಳವಾರ ನಡೆದ ಸರ್ಕಾರಿ ನೌಕರರೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಶಿವಕುಮಾರ್ ಅವರು ನೌಕರರನ್ನು ಉದ್ದೇಶಿಸಿ ಮಾತನಾಡಿದರು. "ನಮ್ಮನ್ನು ಸೇರಿದಂತೆ ರಾಜ್ಯದ ಜನರ ಸೇವೆ ಮಾಡುವ ಅವಕಾಶ ಸಿಕ್ಕಿರುವುದು 5.50 ಲಕ್ಷ ಸರ್ಕಾರಿ ನೌಕರರಿಗೆ ಮಾತ್ರ. ನಾವು ನಮಗೆ ಸಿಕ್ಕ ಅವಕಾಶ ಬಳಸಿಕೊಳ್ಳಬೇಕು. ಕೆಂಗಲ್ ಹನುಮಂತಯ್ಯ ಅವರ ಕಾಲದಿಂದ ಇಲ್ಲಿಯವರೆಗೆ ಎಲ್ಲ ಸಿಎಂಗಳು ತಮ್ಮದೇ ರೀತಿಯಲ್ಲಿ, ತಮ್ಮದೇ ಅನುಭವ ಸಿದ್ಧಾಂತದ ಮೇಲೆ ಆಡಳಿತ ಮಾಡಿದ್ದಾರೆ. ಕೆಂಗಲ್ ಹನುಮಂತಯ್ಯ ಅವರು ಜೈಲಿನ ಖೈದಿಗಳಿಂದ ವಿಧಾನಸೌಧ ಕಟ್ಟಿಸಿದರು. ಆಗ ಕೆಲವು ಖೈದಿಗಳು ಹನುಮಂತಯ್ಯ ಅವರ ಮೇಲೆ ಚಪ್ಪಲಿ ಎಸೆದಿದ್ದರು. ವಿಶ್ವೇಶ್ವರಯ್ಯ ಅವರು ರೂ.1 ಗೆ ಕೆಲಸ ಮಾಡುತ್ತಿದ್ದರು ಎಂಬ ಇತಿಹಾಸ ಇದೆ. ನಾನು ಈ ಹಿಂದಿನವರ ಕೆಲಸಗಳನ್ನು ಟೀಕೆ ಮಾಡುವುದಿಲ್ಲ. ಟೀಕೆಗಳು ಸಾಯುತ್ತವೆ, ನಮ್ಮ ಕೆಲಸಗಳು ಉಳಿಯುತ್ತವೆ" ಎಂದು ತಿಳಿಸಿದರು.

"ಅಂಬೇಡ್ಕರ್ ಅವರು ಇತಿಹಾಸ ಮರೆತವ ಇತಿಹಾಸ ಸೃಷ್ಟಿಸಲಾರ ಎಂದು ಹೇಳಿದ್ದಾರೆ. ನೀವು ಸಾಕಷ್ಟು ವಿದ್ಯೆ, ಅನುಭವ ಹೊಂದಿದ್ದೀರಿ. ನಾನು ಹೆಚ್ಚು ಓದಿಲ್ಲ, ಆದರೆ ಜಿಲ್ಲಾ ಪಂಚಾಯ್ತಿ ಸದಸ್ಯನಾಗಿ, ಶಾಸಕ, ಮಂತ್ರಿ, ಉಪಮುಖ್ಯಮಂತ್ರಿಯಾಗಿ ಅನುಭವ ಇದೆ. ನೀವು ಶ್ರಮಜೀವಿ, ಸರ್ಕಾರದ ನಾಡಿ ಮಿಡಿತ ಇಟ್ಟುಕೊಂಡು, ಜನ ಮತ್ತು ಸರ್ಕಾರದ ಸೇತುವೆಯಾಗಿದ್ದೀರಿ. ನಾವು ಅಧಿಕಾರದಲ್ಲಿ ಇದ್ದಾಗ ಯಾವ ಸಾಕ್ಷಿಗುಡ್ಡೆ ಬಿಟ್ಟು ಹೋಗುತ್ತೇವೆ ಎಂಬುದು ಮುಖ್ಯ" ಎಂದು ಕರೆ ಕೊಟ್ಟರು. "ನಮ್ಮ ನಿಮ್ಮ ಮೇಲೆ ಜನರ ಬದುಕಿನಲ್ಲಿ, ಬದಲಾವಣೆ ತರುವ ಜವಾಬ್ದಾರಿ ಇದೆ. ನಾನು ಇತಿಹಾಸ ಓದಲು ಬರೆಯಲು ಇಚ್ಚಿಸುವುದಿಲ್ಲ. ಇತಿಹಾಸ ಸೃಷ್ಟಿಸಲು ಬಯಸುತ್ತೇನೆ. ಸರ್ಕಾರಿ ನೌಕರರ ಸೇವೆಯಿಂದಲೇ ನಮ್ಮ ರಾಜ್ಯ ಈ ಹಂತಕ್ಕೆ ಬೆಳೆದಿದೆ" ಎಂದರು. ಮಹಾರಾಜರ ಕಾಲದಿಂದ ಪರಿಶುದ್ಧ ಆಡಳಿತದಿಂದ ರಾಜ್ಯದ ಪ್ರಗತಿ: "ಮೈಸೂರಿನ ಕಾರ್ಯಕ್ರಮದಲ್ಲಿ ನಾನು ಪ್ರಧಾನಮಂತ್ರಿಗಳ ಬಳಿ ಒಂದು ಮಾತು ಹೇಳಿದ್ದೆ. ಅಟಲ್ ಬಿಹಾರಿ ವಾಜಪೇಯಿ ಅವರು ಇದೆ ಹಾಲ್ ನಲ್ಲಿ, ವಿಶ್ವದ ನಾಯಕರು ಮೊದಲು ದೆಹಲಿಗೆ ಬಂದು ನಂತರ ದೇಶದಲ್ಲಿ ಬೇರೆ ನಗರಗಳಿಗೆ ಹೋಗುತ್ತಿದ್ದರು. ಆದರೆ ಈಗ ಮೊದಲು ಬೆಂಗಳೂರಿಗೆ ಬಂದು ನಂತರ ಬೇರೆ ನಗರಗಳಿಗೆ ಹೋಗುತ್ತಿದ್ದಾರೆ ಎಂದು ಹೇಳಿದ್ದರು. ಇದು ಕೇವಲ ಕಾಂಗ್ರೆಸ್ ಸರ್ಕಾರದ ಸಾಧನೆ ಎಂದು ನಾನು ಹೇಳಲ್ಲ. ರಾಜ ಮಹಾರಾಜರ ಕಾಲದಿಂದ ಪರಿಶುದ್ಧ ಆಡಳಿತದ ಪರಿಣಾಮ, ನಮ್ಮ ವಿದ್ಯಾರ್ಥಿಗಳ ಜ್ಞಾನ, ಪ್ರತಿಭಾನ್ವಿತ ಮಾನವ ಸಂಪನ್ಮೂಲಗಳ ಕಾರಣ. ಮಹಾರಾಜರು ಬೆಂಗಳೂರಿನಲ್ಲೇ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಸೈನ್ಸ್ ಆರಂಭಿಸಿದರು" ಎಂದರು.

"ಅಧಿಕಾರ ಜವಾಬ್ದಾರಿ ಸಂಕೇತ. ಇದು ಸಿಂಹಾಸನ ಅಲ್ಲ, ಅವಕಾಶ. ಮೂರ್ತಿಗೆ ಬೆಲೆ ಕಟ್ಟಿದರೂ ಭಗವಂತನಿಗೆ ಬೆಲೆ ಕಟ್ಟಲು ಆಗಲ್ಲ. ಜನರಲ್ಲೇ ದೇವರನ್ನು ಕಾಣಬಹುದು. ಗ್ಯಾರಂಟಿ ಬಗ್ಗೆ ಶಾಸಕರು, ವಿರೋಧ ಪಕ್ಷದವರು ಟೀಕೆ ಮಾಡುತ್ತಿದ್ದಾರೆ. ಪ್ರಧಾನಮಂತ್ರಿಗಳು ಟೀಕಿಸಿದರೂ ನಂತರ ಅವರೇ ಪಾಲಿಸುವಂತಾಗಿದೆ. ನಮ್ಮ ಮಾದರಿ ದೇಶಕ್ಕೆ ಮಾದರಿಯಾಗಿದೆ" ಎಂದು ಹೇಳಿದರು.

ಕಾನೂನು ಚೌಕಟ್ಟಿನಲ್ಲಿ ಜನರ ಸಮಸ್ಯೆಗೆ ಸ್ಪಂದಿಸಿ: ಸರ್ಕಾರ ನೌಕರರ ಸಂಘದವರು ಗ್ಯಾರಂಟಿ ಯೋಜನೆ ತ್ಯಜಿಸುವ ನಿರ್ಧಾರಕ್ಕೆ ಬಂದಿದ್ದಾರೆ. ಅವರಿಗೆ ಅಭಿನಂದನೆಗಳು. ಕೇಂದ್ರ ಕಚೇರಿಯಲ್ಲಿ ಇದ್ದು ಕೆಲಸ ಮಾಡದಿದ್ದರೆ ಮತ್ತೆ ನಿಮಗೆ ಈ ಜವಾಬ್ದಾರಿ ಯಾಕೆ? ಪ್ರತಿ ತಾಲ್ಲೂಕಿನಲ್ಲಿ ಎಲ್ಲಾ ಅಧಿಕಾರಿಗಳು ಅಲ್ಲೇ ವಾಸ ಇರಬೇಕು. ಇಂದು 750 ಕಡೆ ಸಭೆ ಈ ಕಾರ್ಯಕ್ರಮ ನಡೆಯುತ್ತಿದೆ. ರಾಜ್ಯದ ಪ್ರಮುಖ ನೌಕರನಾಗಿ ಸರ್ಕಾರದ ಚಿಂತನೆ, ಮುಂದಿನ ದಿನಗಳಲ್ಲಿ ಸಾಗಬೇಕಾದ ದಾರಿ ಬಗ್ಗೆ ಮಾರ್ಗದರ್ಶನ ನೀಡಲು ಬಂದಿರುವೆ. ಮನಸ್ಸು ಶುದ್ಧವಾಗಿ, ಪಾರದರ್ಶಕವಾಗಿ ಕೆಲಸ ಮಾಡಿದರೆ ಸಮಸ್ಯೆಗೆ ಪರಿಹಾರ ನೀಡಬಹುದು" ಎಂದು ಕಿವಿಮಾತು ಹೇಳಿದರು.

## ಜಗಳೂರಿನಲ್ಲಿ ನಾಡಗೀತೆಗೆ ಗೌರವ ನೀಡದ ಅಧಿಕಾರಿಗಳ ವಿರುದ್ಧ ಡಿಕೆಶಿ ಗರಂ!





**ಅನಂತ ಜನಶಕ್ತಿ ನ್ಯೂಸ್ :-**

**ಜಗಳೂರು ಘಟನೆ ಸಾಮಾಜಿಕ ಜಾಲತಾಣದಲ್ಲಿ ವೈರಲ್: ಗುರುಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಿಎಂ ಡಿ.ಕೆ. ಶಿವಕುಮಾರ್ ಅವರು ಅಧಿಕಾರಿಗಳ ನಡೆಗೆ ಅಸಮಾಧಾನ ವ್ಯಕ್ತಪಡಿಸಿರುವ ದೃಶ್ಯಗಳು ಇದೀಗ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ. "ಜಗಳೂರಿನಲ್ಲಿ ನಾಡಗೀತೆಗೆ ಗೌರವ ನೀಡದ ಅಧಿಕಾರಿಗಳ ವಿರುದ್ಧ ಡಿಕೆಶಿ ಗರಂ" ಎಂಬ ಚರ್ಚೆಯೊಂದಿಗೆ ವಿಡಿಯೋ ವೈರಲ್ ಆಗಿದ್ದು, ಸರ್ಕಾರಿ ಕಾರ್ಯಕ್ರಮಗಳಲ್ಲಿ ಶಿಷ್ಟಾಚಾರ ಪಾಲನೆಯ ಕುರಿತು ಸಾರ್ವಜನಿಕ ವಲಯದಲ್ಲಿ ಚರ್ಚೆ ಹುಟ್ಟುಹಾಕಿದೆ.**

ಜಗಳೂರು, ಆ.11: ಸರ್ಕಾರಿ ನೌಕರರೊಂದಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ನಡೆಸಿದ ವಿಡಿಯೋ ಸಂವಾದ ಕಾರ್ಯಕ್ರಮದಲ್ಲಿ ನಾಡಗೀತೆ ಮೊಳಗುತ್ತಿದ್ದ ವೇಳೆ ಜಗಳೂರು ಸೇರಿದಂತೆ ಹಲವು ತಾಲೂಕುಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಕುಳಿತಿರುವುದು ಮುಖ್ಯಮಂತ್ರಿ ಗಮನಕ್ಕೆ ಬಂದು, ಅಧಿಕಾರಿಗಳ ನಡೆಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಘಟನೆ ನಡೆದಿದೆ.

ಜಗಳೂರಿನ ಗುರುಭವನದಲ್ಲಿ ನಡೆದ ಈ ಕಾರ್ಯಕ್ರಮದ ವಿಡಿಯೋ ಇದೀಗ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ರಾಜ್ಯ ಸರ್ಕಾರದ ವತಿಯಿಂದ ಮಂಗಳವಾರ ಆಯೋಜಿಸಿದ್ದ "ಸರ್ಕಾರದ ನೌಕರರೊಂದಿಗೆ ಮುಖ್ಯಮಂತ್ರಿಗಳ ಸಂವಾದ" ಕಾರ್ಯಕ್ರಮ ಜಗಳೂರಿನ ಗುರುಭವನದಲ್ಲಿ ನಡೆಯಿತು. ಕಾರ್ಯಕ್ರಮದಲ್ಲಿ ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸರ್ಕಾರಿ ನೌಕರರು ಭಾಗವಹಿಸಿದ್ದರು. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ವಿಡಿಯೋ ಕಾನ್ಫರೆನ್ಸ್ ಮೂಲಕ ಅಧಿಕಾರಿಗಳೊಂದಿಗೆ ಸಂವಾದ ನಡೆಸುತ್ತಿದ್ದ ಸಂದರ್ಭದಲ್ಲಿ ನಾಡಗೀತೆ ಪ್ರಸಾರವಾಯಿತು.

ಈ ವೇಳೆ ನಾಡಗೀತೆಗೆ ಗೌರವ ಸಲ್ಲಿಸದೆ ಬಹುತೇಕ ಅಧಿಕಾರಿಗಳು ಕುಳಿತಿರುವುದನ್ನು ಗಮನಿಸಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಅಧಿಕಾರಿಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

"ನನ್ನ ಕಣ್ಣು ಕುರುಡಾಗಿದೆ ಎಂದುಕೊಳ್ಳಬೇಡಿ":

ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಖಾರವಾಗಿ ಪ್ರತಿಕ್ರಿಯಿಸಿ, "ಕೆಲವರು ನನ್ನ ಕಣ್ಣು ಕುರುಡಾಗಿದೆ ಎಂದು ತಿಳಿದಿದ್ದಾರೆ. ಜಗಳೂರು ಸೇರಿದಂತೆ ಸುಮಾರು ಏಳು ತಾಲೂಕುಗಳಲ್ಲಿ ನಾಡಗೀತೆ ನಡೆಯುತ್ತಿದ್ದ ಸಂದರ್ಭದಲ್ಲಿ ಕೆಲವರು ಕುಳಿತಿದ್ದರು" ಎಂದು ಹೇಳಿದರು.

ತಾಲೂಕುಗಳಲ್ಲಿ ಆಡಳಿತ ಹೇಗೆ ನಡೆಯುತ್ತಿದೆ ಎಂಬುದರ ಬಗ್ಗೆ ತಮ್ಮ ಗಮನವಿದೆ. ತಮ್ಮ ಪಿಎ ಹಾಗೂ ಗನ್‌ಮ್ಯಾನ್ ಸೇರಿದಂತೆ ತಮ್ಮ ಸುತ್ತಮುತ್ತಲಿನ ವ್ಯವಸ್ಥೆಯ ಮೂಲಕ ಹಲವು ವಿಚಾರಗಳನ್ನು ಗಮನಿಸುತ್ತಿರುವುದಾಗಿ ತಿಳಿಸಿದ ಅವರು, ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳ ಕಾರ್ಯವೈಖರಿಯ ಬಗ್ಗೆಯೂ ಮಾಹಿತಿ ಪಡೆಯುತ್ತಿರುವುದಾಗಿ ಹೇಳಿದರು.

"ನಾನು ಸುಮ್ಮನೆ ಉದಾಹರಣೆ ಕೊಟ್ಟು ಹೇಳುತ್ತಿದ್ದೇನೆ. ನನಗೆ ಇಲ್ಲಿ ಜಗಳೂರು ಕಾಣಲಿಲ್ಲ ಎಂದುಕೊಳ್ಳಬೇಡಿ. ಕೇವಲ ಒಂದು ನಿಮಿಷದಲ್ಲೇ ಎಲ್ಲವನ್ನೂ ತಿಳಿಯಬಲ್ಲೆ. ಇನ್ನೂ ಏಳು ತಾಲೂಕುಗಳಲ್ಲಿ ಅಧಿಕಾರಿಗಳು ಕುಳಿತಿದ್ದಾರೆ. ಅದರ ವಿಡಿಯೋ ರೆಕಾರ್ಡ್ ನಮ್ಮ ಬಳಿ ಇದೆ" ಎಂದು ಎಚ್ಚರಿಕೆ ನೀಡಿದರು.ಅಧಿಕಾರಿಗಳು ಹಾಗೂ ಸಿಬ್ಬಂದಿ ಸರ್ಕಾರಿ ಕಾರ್ಯಕ್ರಮಗಳಲ್ಲಿ ಶಿಸ್ತು ಮತ್ತು ಶಿಷ್ಟಾಚಾರವನ್ನು ಕಡ್ಡಾಯವಾಗಿ ಪಾಲಿಸಬೇಕು. ನಾಡಗೀತೆಗೆ ಗೌರವ ಸಲ್ಲಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂಬ ಸಂದೇಶವನ್ನು ಸಿಎಂ ಅವರ ಮಾತುಗಳು ಸಾರಿದವು.

## 3 ಲಕ್ಷಕ್ಕೆ ಬೆದರಿಕೆ: ಮೂವರು ಆರೋಪಿಗಳ ಬಂಧನ

## 35 ಗ್ರಾಂ ಚಿನ್ನಾಭರಣ, ಮೊಬೈಲ್ ವಶ; ಉಳಿದ ಆರೋಪಿಗಳಿಗಾಗಿ ಶೋಧ

ಜಗಳೂರು: ಮಹಿಳೆಯರನ್ನು ಇಟ್ಟುಕೊಂಡು ವ್ಯವಹಾರ ನಡೆಸುತ್ತಿರುವುದಾಗಿ ಆರೋಪಿಸಿ, ಮಹಿಳಾ ಆಯೋಗಕ್ಕೆ ದೂರು ನೀಡಿ ಮಾಧ್ಯಮಗಳಲ್ಲಿ ಸುದ್ದಿ ಪ್ರಕಟಿಸುವುದಾಗಿ ಬೆದರಿಸಿ 3 ಲಕ್ಷ ಹಣಕ್ಕೆ ಬೇಡಿಕೆ ಇಟ್ಟಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಜಗಳೂರು ಪೊಲೀಸರು ಮೂವರು ಆರೋಪಿಗಳನ್ನು ಬಂಧಿಸಿ, 35 ಗ್ರಾಂ ಚಿನ್ನಾಭರಣ ಹಾಗೂ ಒಂದು ಮೊಬೈಲ್‌ನ್ನು ವಶಪಡಿಸಿಕೊಂಡಿದ್ದಾರೆ.

ಜಗಳೂರು ಪಟ್ಟಣದ 41 ವರ್ಷದ ನೀಲಮ್ಮ ಅವರು ಆ.11ರಂದು ಜಗಳೂರು



ಪೊಲೀಸ್ ಠಾಣೆಗೆ ನೀಡಿದ ಲಿಖಿತ ದೂರಿನ ಆಧಾರದ ಮೇಲೆ ಠಾಣೆಯಲ್ಲಿ ಗುನ್ನೆ ನಂ.160/2026ರಂತೆ ಕಲಂ 329(4), 308(2), 3(5) ಬಿಎನ್‌ಎಸ್ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿತ್ತು.

ಆರೋಪಿತರು ನೀಲಮ್ಮ ಅವರ ಮನೆಗೆ ಬಂದು, ಮಹಿಳೆಯರನ್ನು ಇಟ್ಟುಕೊಂಡು ವ್ಯವಹಾರ ಮಾಡುತ್ತಿರುವುದಾಗಿ ಆರೋಪಿಸಿದ್ದಾರೆ. ಈ ಬಗ್ಗೆ ತಮ್ಮ ಬಳಿ ಸಾಕ್ಷ್ಯಾಧಾರಗಳಿದ್ದು, ಮಹಿಳಾ ಆಯೋಗಕ್ಕೆ ದೂರು ನೀಡಿ ಮಾಧ್ಯಮಗಳಲ್ಲಿ ಸುದ್ದಿ ಪ್ರಕಟಿಸುವ ಮೂಲಕ ಮಾನ-ಮರ್ಯಾದೆಗೆ ಧಕ್ಕೆ ತರುವುದಾಗಿ ಬೆದರಿಸಿದ್ದಾರೆ ಎನ್ನಲಾಗಿದೆ. ಅಲ್ಲದೆ, ಕೆಲವರು ಮೊಬೈಲ್‌ನಲ್ಲಿ ವಿಡಿಯೊ ಚಿತ್ರೀಕರಿಸಿ, 3 ಲಕ್ಷ ಹಣ ನೀಡುವಂತೆ ಒತ್ತಾಯಿಸಿದ್ದಾರೆ. ಹಣ ನೀಡುವವರೆಗೆ ಫಿರ್ಯಾದಿದಾರರ ಕೊರಳಲ್ಲಿದ್ದ ಬಂಗಾರದ ಸರ ಹಾಗೂ ಮೊಬೈಲ್ ಕಿತ್ತುಕೊಂಡು ಹೋಗಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ.

ಪ್ರಕರಣದ ತನಿಖೆಯನ್ನು ದಾವಣಗೆರೆ ಗ್ರಾಮಾಂತರ ಉಪವಿಭಾಗದ ಡಿವೈಎಸ್ಪಿ ಬಸವರಾಜ್ ಬಿ.ಎಸ್. ಹಾಗೂ ಜಗಳೂರು ಪೊಲೀಸ್ ಠಾಣೆ ಪಿಐ ಸಿದ್ರಾಮಯ್ಯ ಅವರ ಮಾರ್ಗದರ್ಶನದಲ್ಲಿ ಪಿಎಸ್‌ಐ ಧರೇಪ್ಪ ಬಿ. ದೊಡಮನಿ ಹಾಗೂ ಸಿಬ್ಬಂದಿಯ ತಂಡ ಕೈಗೊಂಡಿತ್ತು. ತನಿಖೆ ನಡೆಸಿದ ಪೊಲೀಸರು ಪ್ರಕರಣಕ್ಕೆ ಸಂಬಂಧಿಸಿದಂತೆ ಎ1 ತಿಮ್ಮೇಶ (34), ಜಗಳೂರು ತಾಲೂಕು, ಎ2 ಗುರುರಾಜ್ ಅಲಿಯಾಸ್ ಗುರು (41), ಜಗಳೂರು ತಾಲೂಕು ಹಾಗೂ ಎ8 ಸಂತೋಷ (30), ಹೂವಿನಹಡಗಲಿ ತಾಲೂಕು ಇವರನ್ನು ಬಂಧಿಸಿದ್ದಾರೆ. ಆರೋಪಿಗಳಿಂದ ಪ್ರಕರಣಕ್ಕೆ ಸಂಬಂಧಿಸಿದ 35 ಗ್ರಾಂ ಬಂಗಾರದ ಆಭರಣ ಹಾಗೂ ಒಂದು ಮೊಬೈಲ್ ವಶಪಡಿಸಿಕೊಳ್ಳಲಾಗಿದೆ.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.